ಅಣಬೆಗಳಂತೆ ಖಾಸಗಿ ಶಾಲೆಗಳು ತಲೆ ಎತ್ತುತ್ತಿದ್ದು, ಮತ್ತೊಂದೆಡೆ ರಾಜ್ಯದಲ್ಲಿ ಸರ್ಕಾರಿ ಕನ್ನಡ ಮಾಧ್ಯಮ ಶಾಲೆಗಳು ಮುಚ್ಚುತ್ತಿವೆ. ಬಡ ಹಿಂದುಳಿದ, ದಲಿತ ಅಲ್ಪಸಂಖ್ಯಾತರ ಮಕ್ಕಳು ಖಾಸಗಿ ಶಾಲೆಗಳಲ್ಲಿ ಡೊನೇಷನ್ ಪಿಡುಗಿನಿಂದ ಶಾಲೆಗಳಲ್ಲಿ ಓದುವುದು ಅಸಾಧ್ಯವಾಗುತ್ತಿದೆ.
• **ಅರುಣ್ ನಗವತ್** ಎಸ್‌ಎಫ್‌ಐ ಜಿಲ್ಲಾ ಮುಖಂಡ

ಸುದ್ದಿ ಸಿಂಚನ

ಇಂಡಿ ಒಕ್ಕೂಟಕ್ಕೆ ನೈತಿಕತೆ ಇಲ್ಲ: ಬೊಮ್ಮಾಯಿ



ಹಾವೇರಿ: ಪಶ್ಚಿಮ ಬಂಗಾಳದ ಚುನಾವಣೆಯಲ್ಲಿ ಹೀನಾಯವಾಗಿ ಸೋತರೂ ಮುಖ್ಯಮಂತ್ರಿ ಸ್ಥಾನಕ್ಕೆ ರಾಜಿನಾಮೆ ನೀಡದೇ ಭಂಡತನ ತೋರುತ್ತಿರುವ ಮಮತಾ ಬ್ಯಾನರ್ಜಿ ಅವರಿಗೆ ಬೆಂಬಲ ಕೊಡುತ್ತಿರುವ ಇಂಡಿ ಒಕ್ಕೂಟಕ್ಕೆ ಸಂವಿಧಾನ, ಪ್ರಜಾಪಭುತ್ವ ಮತ್ತು ಡಾ. ಬಿ.ಆರ್. ಅಂಬೇಡ್ಕರ್‌ಅವರ ಬಗ್ಗೆ ಮಾತನಾಡುವ ಯಾವುದೇ ನೈತಿಕತೆ ಇಲ್ಲ ಎಂದು ಮಾಜಿ ಮುಖ್ಯಮಂತ್ರಿ, ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಶ್ಚಿಮ ಬಂಗಾಳದಲ್ಲಿ ಟಿಎಂಸಿ ಪ್ರತಿಯೊಂದರಲ್ಲೂ ಸಂವಿಧಾನ ವಿರೋಧಿಯಾಗಿ ನಡೆದುಕೊಂಡಿದೆ. ಈಗ ಹೀನಾಯ ಸೋಲು ಕಂಡರೂ, ಮಮತಾ ಬ್ಯಾನರ್ಜಿ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡದೇ ಭಂಡತನ ತೋರುತ್ತಿದ್ದಾರೆ. ಅವರು ಪ್ರಜಾಪ್ರಭುತ್ವದಲ್ಲಿ ನಂಬಿಕೆ ಇಟ್ಟುಕೊಂಡಿಲ್ಲ ಎಂದರು.

ಸಾಂಕೇತಿಕ ಪ್ರತಿಭಟನೆ



ಸವಣೂರು: ಪಟ್ಟಣದ ದಂಡಿನಪೇಟೆ ಅಗಸಿಬಾಗಿಲ ಹತ್ತಿರ ವಾಸಿಸುವ ಸಾರ್ವಜನಿಕರು ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಗುರುವಾರ ಕಂದಾಯ ಇಲಾಖೆ ಕಚೇರಿ ಎದುರಲ್ಲಿ ಸಾಂಕೇತಿಕ ಪ್ರತಿಭಟನೆ ಕೈಗೊಂಡು ತಹಸೀಲ್ದಾರ್‌ರವಿಕುಮಾರ ಕೊರವರ ಮೂಲಕ ಶಾಸಕ ಯಾಸೀರಹ್ಮದಖಾನ್ ಪಠಾಣ ಅವರಿಗೆ ಮನವಿ ಸಲ್ಲಿಸಿದರು. ಪಟ್ಟಣದ 4ನೇ ವಾರ್ಡ್ ವ್ಯಾಪ್ತಿಯಲ್ಲಿರುವ ಬ್ಲಾಕ್ ನಂ. 6ರಲ್ಲಿ ಸುಮಾರು 60 ವರ್ಷಗಳಿಂದ ಮನೆಗಳನ್ನು ನಿರ್ಮಿಸಿಕೊಂಡು ವಾಸಿಸುತ್ತಿರುವ ಕುಟುಂಬಸ್ಥರಿಗೆ ಮನೆಗಳ ಪಟ್ಟಾ ವಿತರಿಸಬೇಕು. ಈಗಾಗಲೇ ನಾವು ಪ್ರತಿ ಮನೆ ಕರ (ಟ್ಯಾಕ್ಸ್) ಕಟ್ಟುವುದು ಸೇರಿದಂತೆ ಇತರ ಸರ್ಕಾರದ ಆದೇಶಗಳನ್ನು ಪಾಲಿಸುತ್ತಾ ಬಂದಿದ್ದೇವೆ. ಆದ್ದರಿಂದ ನಾವು ವಾಸಿಸುವ ಮನೆಗಳ ಪಟ್ಟಾವನ್ನು ನಮ್ಮ ಹೆಸರಲ್ಲಿ ನೀಡುವ ಮೂಲಕ ವಾಸಸ್ಥಳವನ್ನು ಅಭಿವೃದ್ಧಿ ಕೈಗೊಳ್ಳಲು ಮುಂದಾಗಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ. ಪ್ರಮುಖರಾದ ಅಯಾಜ್ ನಾರಲಬೊಡಿ, ಮಹ್ಮದ ಹನೀಫ್ ಜವಳಿ, ಹೆಗ್ಗಪ್ಪ ಕಲಾಲ, ಜಹೀರ ಬಂಕಾಪುರ, ರಫೀಕ ಹಕೀಮ್, ಸಂದೀಪ ಬಾಬನಿ, ಆನಂದ ಕರ್ನೂಲ, ಜೀಲಾನಿ ಬಳ್ಳಾರಿ ಇದ್ದರು.

ಡೊನೇಶನ್ ಹಾವಳಿ ವಿರೋಧಿಸಿ ಎಸ್ಎಫ್ಐ ನೇತೃತ್ವದಲ್ಲಿ ಪ್ರತಿಭಟನೆ

ಡೊನೇಶನ್ ವಸೂಲಿ ಮಾಡುತ್ತಿರುವ ಶಿಕ್ಷಣ ಸಂಸ್ಥೆಗಳ ಮೇಲೆ ಕ್ರಮಕ್ಕೆ ಆಗ್ರಹ



ಡೊನೇಶನ್ ಹಾವಳಿ ವಿರೋಧಿಸಿ ಹಾವೇರಿ ನಗರದ ಮಹಾತ್ಮಾ ಗಾಂಧಿ ವೃತ್ತದಲ್ಲಿ ಗುರುವಾರ ಎಸ್‌ಎಫ್‌ಐ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

• **ಕನ್ನಡಪ್ರಭ ವಾರ್ತೆ** ಹಾವೇರಿ

ಶಿಕ್ಷಣಸಂಸ್ಥೆಗಳಲ್ಲಿ ಡೊನೇಶನ್ ಹಾವಳಿ ವಿರೋಧಿಸಿ, ಜಿಲ್ಲಾ ಶಿಕ್ಷಣ ರೆಗ್ಯುಲೇಟಿಂಗ್ ಪ್ರಾಧಿಕಾರವನ್ನು ರಚಿಸುವಂತೆ, ಶಾಲಾ-ಕಾಲೇಜುಗಳಲ್ಲಿ ಡೊನೇಶನ್ ವಸೂಲಿ ಮಾಡುತ್ತಿರುವ ಶಿಕ್ಷಣ ಸಂಸ್ಥೆಗಳ ಮೇಲೆ ಕ್ರಮ ಕೈಗೊಳ್ಳಲು ಆಗ್ರಹಿಸಿ ಎಸ್‌ಎಫ್‌ಐ ನೇತೃತ್ವದಲ್ಲಿ ಗುರುವಾರ ನಗರದ ಮಹಾತ್ಮಾ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.

ಈ ವೇಳೆ ಡಿವೈಎಫ್‌ಐ ರಾಜ್ಯ ಕಾರ್ಯದರ್ಶಿ ಬಸವರಾಜ ಪೂಜಾರ್‌ಮಾತನಾಡಿ, ಸರ್ಕಾರ ನಿಗದಿಪಡಿಸಿದಂತೆ ಅನುದಾನಿತ ಶಿಕ್ಷಣ ಸಂಸ್ಥೆಗಳು ಹಾಗೂ ಅನುದಾನರಹಿತ ಶಿಕ್ಷಣ ಸಂಸ್ಥೆಗಳು ಅಭಿವೃದ್ಧಿ ಶುಲ್ಕ (ಡೆವಲಪ್‌ಮೆಂಟ್ ಫೀ) ನ್ನು ಸಂಗ್ರಹಿಸಲು ಅವಕಾಶವಿದೆ. ಈ ಹಣವನ್ನು ಒತ್ತಾಯದ ಮೂಲಕ ಸಂಗ್ರಹಿಸುವಂತಿಲ್ಲ. ಇದಕ್ಕೂ ಹೆಚ್ಚು ಸಂಗ್ರಹಿಸುವುದು ಕಾನೂನಿನ ಪ್ರಕಾರ ಅಪರಾಧವಾಗಿದೆ. ಶಿಕ್ಷಣ ಹಕ್ಕು ಕಾಯ್ದೆ-1983 ಮತ್ತು 2009ರ ಆರ್‌ಟಿಇ ಕಾಯ್ದೆ ಜಾರಿಯಾದರೂ ಸಮರ್ಪಕವಾಗಿ ಪಾಲನೆಯಾಗುತ್ತಿಲ್ಲ. ಬಹುತೇಕ ಖಾಸಗಿ ಶಾಲೆಗಳಲ್ಲಿ ಲಕ್ಷಾಂತರ ರುಪಾಯಿ ವರೆಗೂ ಹಣ ವಸೂಲಿ ಮಾಡುವ ಮೂಲಕ ಹಗಲು ದರೋಡೆ ಮಾಡುತ್ತಿದ್ದಾರೆ ಎಂದು ದೂರಿದರು.

ಡೊನೇಷನ್ ನಿಯಂತ್ರಣಕ್ಕೆ ಜಿಲ್ಲಾ ಶಿಕ್ಷಣ ರೆಗ್ಯುಲೆಟಿಂಗ ಪ್ರಾಧಿಕಾರ (ಡೊನೇಷನ್ ವಿರೋಧಿ ಸಮಿತಿ)ವನ್ನು ತಕ್ಷಣ ರಚಿಸಬೇಕು. ವಂತಿಗೆ ವಸೂಲಿ ಮಾಡುತ್ತಿರುವ ಶಿಕ್ಷಣ ಸಂಸ್ಥೆಗಳ ಮೇಲೆ ಕ್ರಮಕೈಗೊಳ್ಳಬೇಕು. ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಜಿಲ್ಲಾಧಿಕಾರಿ ಮತ್ತು ತಹಸೀಲ್ದಾರ್ ನೇತೃತ್ವದಲ್ಲಿ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರು ಮತ್ತು ಶಿಕ್ಷಣ ಇಲಾಖೆಯ ಮುಖ್ಯಸ್ಥರು, ಪಾಲಕರು, ವಿದ್ಯಾರ್ಥಿ ಸಂಘಟನೆಯ ಪ್ರತಿನಿಧಿಗಳ ಜಂಟಿ ಸಭೆ ಕರೆಯಬೇಕು. ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ನಿಯಂತ್ರಿಸಲು ರಾಜ್ಯ ಸರ್ಕಾರಕ್ಕೆ ಅಧಿಕಾರವಿರುವ ಕೇಂದ್ರೀಯ ಶಾಸನ ಜಾರಿಗೆ ತರಬೇಕು. ಸರ್ಕಾರ ನಿಗದಿಗೊಳಿಸಿರುವ ಪ್ರವೇಶ ಶುಲ್ಕದ ವಿವರವನ್ನು ಮಾಧ್ಯಮಗಳ ಮೂಲಕ ಮತ್ತು ಭಿತ್ತಿಪತ್ರ, ಕರಪತ್ರಗಳ ಮೂಲಕ ಪ್ರಚಾರ ಪಡಿಸಬೇಕು.

ಶಿಕ್ಷಣ ಸಂಸ್ಥೆಗಳು ಪ್ರತಿ ತಿಂಗಳಿಗೊಮ್ಮೆ ಪಾಲಕರ ಸಭೆ ಕರೆದು ವಿದ್ಯಾರ್ಥಿಗಳು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಚರ್ಚಿಸುವಂತೆ ನಿರ್ದೇಶಿಸಬೇಕು. ಜಿಲ್ಲಾಧಿಕಾರಿ ಡೊನೇಷನ್ ನಿಯಂತ್ರಣಕ್ಕೆ ಜಿಲ್ಲಾ ಶಿಕ್ಷಣ ರೆಗ್ಯುಲೆಟಿಂಗ್ ಪ್ರಾಧಿಕಾರ ರಚನೆ ಕುರಿತು 15 ದಿನಗಳ ಒಳಗಾಗಿ ಪಾಲಕರು ಶಿಕ್ಷಣ ಸಂಸ್ಥೆಯ ಮುಖ್ಯಸ್ಥರು, ಶಿಕ್ಷಣ ಇಲಾಖೆಯ ಮುಖ್ಯಸ್ಥರು, ವಿದ್ಯಾರ್ಥಿ ಸಂಘಟನೆಯ ಪ್ರತಿನಿಧಿಗಳ ಜಂಟಿಸಭೆ ಕರೆಯಬೇಕು. ನಿಯಮ ಮೀರಿ ಡೊನೇಷನ್ ಪಡೆದ ಖಾಸಗಿ ಶಿಕ್ಷಣ ಸಂಸ್ಥೆಗೆ ಶಿಕ್ಷಣ ಹಕ್ಕು ಕಾಯ್ದೆಯ ಪ್ರಕಾರ ದಂಡ ಮತ್ತು ಶಿಕ್ಷೆಗೊಳಪಡಿಸಬೇಕು. ಡೋನೆಷನ್ ಹಾವಳಿ ತಡೆಗಟ್ಟಿ ಡೇರಾ ಕಮಿಟಿ ರಚಿಸಬೇಕು ಎಂದು ಆಗ್ರಹಿಸಿದರು.

ಎಸ್‌ಎಫ್‌ಐ ಜಿಲ್ಲಾ ಮುಖಂಡ ಅರುಣ್ ನಗವತ್ ಮಾತನಾಡಿ, ಅಣಬೆಗಳಂತೆ ಖಾಸಗಿ ಶಾಲೆಗಳು ತಲೆ ಎತ್ತುತ್ತಿದ್ದು, ಮತ್ತೊಂದೆಡೆ ರಾಜ್ಯದಲ್ಲಿ ಸರ್ಕಾರಿ ಕನ್ನಡ ಮಾಧ್ಯಮ ಶಾಲೆಗಳು ಮುಚ್ಚುತ್ತಿವೆ. ಈಗಾಗಲೆ ಖಾಸಗಿ ಶಾಲೆಗಳಲ್ಲಿ ದಾಖಲಾತಿ ಹೆಸರಲ್ಲಿ ಡೋನೆಷನ್ ಹಣವನ್ನು ಮನಬಂದಂತೆವಸೂಲಿಮಾಡಲುಮುಂದಾಗಿದ್ದಾರೆ. ಬಡ ಹಿಂದುಳಿದ, ದಲಿತ ಅಲ್ಪಸಂಖ್ಯಾತರ ಮಕ್ಕಳು ಖಾಸಗಿ ಶಾಲೆಗಳಲ್ಲಿ ಡೋನೆಷನ್ ಪಿಡುಗಿನಿಂದ ಶಾಲೆಗಳಲ್ಲಿ ಓದುವುದು ಅಸಾಧ್ಯವಾಗುತ್ತಿದೆ ಎಂದು ದೂರಿದರು.

ಕಾಲೇಜ್ ಘಟಕದ ಅಧ್ಯಕ್ಷೆ ಚೈತ್ರಾ ಕೊರವರ ಮಾತನಾಡಿ, ಬಹುತೇಕ ಶಾಲೆಗಳು ಇಲಾಖೆಯ ಆದೇಶವನ್ನು ಉಲ್ಲಂಘಿಸಿದ್ದು, ಅಂತಹ ಶಾಲೆಗಳ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಅನಧಿಕೃತ ಟ್ಯೂಷನ್ ಸೆಂಟರ್‌ಗಳನ್ನು ಮುಚ್ಚಬೇಕು. ಈ ಕೂಡಲೇ ಜಿಲ್ಲಾ ಶಿಕ್ಷಣ ಶುಲ್ಕ ನಿಯಂತ್ರಣ ಪ್ರಾಧಿಕಾರ ಸಭೆ ನಡೆಸಬೇಕು ಎಂದು ಒತ್ತಾಯಿಸಿದರು.

ಜಿಲ್ಲಾಮುಖಂಡರಾದಕೃಷ್ಣನಾಯ್ಕ, ಮಾಲತೇಶ ಇಚ್ಚಂಗಿ, ಪುನೀತ್ ಕುಮಾರ್, ಮನು ಎನ್., ನಾಗರಾಜ್ ಎಂ.ವೈ., ನವೀನ್ ಬಿ.ಕೆ., ಕುಮಾರ ಸಿ., ಮಾಲತೇಶ ಸಿ., ಆಕಾಶ್ ಕೆ., ಪರಶುರಾಮ ಮಾದರ, ಪ್ರದೀಪ ಲಮಾಣಿ, ಮಲ್ಲಿಕಾರ್ಜುನ ಹಡಪದ, ಉಮೇಶ ಡಿ.ಎಸ್., ಮಾಲತೇಶ ಕೆ.ಟಿ., ಮಜಮಿಲ್ ಅಕ್ಕುವಳ್ಳಿ, ನಂದೀಶ ಎಲ್. ಸೇರಿದಂತೆ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಹಾವೇರಿ-ಚೆನ್ನೈ, ಹಿರೇಕೆರೂರು-ಪಂಢರಾಪುರ ವೇಗದೂತ ಸಾರಿಗೆ

• **ಕನ್ನಡಪ್ರಭ ವಾರ್ತೆ** ಹಾವೇರಿ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಹಾವೇರಿ ವಿಭಾಗದ ಹಾವೇರಿ ಘಟಕದಿಂದ ಹಾವೇರಿ-ಚೆನ್ನೈ ಹಾಗೂ ಹಿರೇಕೆರೂರು ಘಟಕದಿಂದ ಹಿರೇಕೆರೂರು-ಪಂಢರಾಪುರಕ್ಕೆ ವೇಗದೂತ ಸಾರಿಗೆಗಳನ್ನು ಪ್ರಾರಂಭಿಸಲಾಗಿದೆ.

ಹಾವೇರಿ ಘಟಕದಿಂದ ಹಾವೇರಿ-ಚೆನ್ನೈ ಹಾವೇರಿಯಿಂದ ರಾತ್ರಿ 9.30ಕ್ಕೆ ಹೊರಟು ಮರುದಿನ ಮಧ್ಯಾಹ್ನ 3 ಗಂಟೆಗೆ ಚೆನ್ನೈ ತಲುಪುವುದು. ಸಂಜೆ ಚೆನ್ನೈನಿಂದ 5 ಗಂಟೆಗೆ ಹೊರಟು ಬೆಳಗ್ಗೆ 8.30 ಗಂಟೆಗೆ ಹಾವೇರಿ ತಲುಪುವುದು. ಹಾವೇರಿಯಿಂದ ಚೆನ್ನೈ ₹803 ಪ್ರಯಾಣ ದರ ನಿಗದಿಯಾಗಿದೆ. ಹಿರೇಕೆರೂರು ಘಟಕದಿಂದ ಹಿರೇಕೆರೂರು-ಪಂಢರಾಪುರ ಬಸ್ ಹಿರೇಕೆರೂರಿಂದ ಬೆಳಗ್ಗೆ 8 ಗಂಟೆಗೆ ಹೊರಟು ಸಂಜೆ 7.30ಕ್ಕೆ ಪಂಢರಾಪುರ ತಲುಪುವುದು. ಬೆಳಗ್ಗೆ ಪಂಢರಾಪುರದಿಂದ 6 ಗಂಟೆಗೆ ಹೊರಟು ಸಂಜೆ 5.30ಕ್ಕೆ ಹಿರೇಕೆರೂರು ತಲುಪುವುದು. ಹಿರೇಕೆರೂರು-ಪಂಢರಾಪುರ ಪ್ರಯಾಣದರ ₹682 ನಿಗದಿಯಾಗಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗುಡುಗು-ಗಾಳಿ ಸಹಿತ ಸುರಿದ ಮಳೆ, ತೇಲಿಹೋದ ತರಕಾರಿ-ಹಣ್ಣು

ಜಿಲ್ಲೆಯ ವಿವಿಧೆಡೆ ಮಳೆ



ಹಾವೇರಿ ನಗರದಲ್ಲಿ ಗುರುವಾರ ಸಂಜೆ ಸುರಿದ ಮಳೆಗೆ ಎಲ್‌ಬಿಎಸ್ ತರಕಾರಿ ಮಾರುಕಟ್ಟೆ ಅಸ್ತವ್ಯಸ್ತವಾಯಿತು.

• **ಕನ್ನಡಪ್ರಭ ವಾರ್ತೆ** ಹಾವೇರಿ

ನಗರ ಸೇರಿದಂತೆ ಜಿಲ್ಲೆಯ ವಿವಿಧೆಡೆ ಗುರುವಾರ ನಸುಕಿನಲ್ಲಿ ನಾಲ್ಕು ಹನಿ ಚೆಲ್ಲಿ ಹೋಗಿದ್ದ ಮಳೆ ಮಧ್ಯಾಹ್ನ ಅರ್ಧ ಗಂಟೆಗೂ ಹೆಚ್ಚುಕಾಲ ಜೋರಾಗಿ ಸುರಿದು, ವಾತಾವರಣ ಸ್ವಲ್ಪ ತಂಪಾಗುವಂತೆ ಮಾಡಿತು.

ಕಳೆದ ಹಲವು ದಿನಗಳಿಂದ ಬಿರು ಬಿಸಿಲಿನ ತಾಪ, ಸೆಕೆ ಹೆಚ್ಚಳವಾಗಿದ್ದು, ಗುರುವಾರ ಮಧ್ಯಾಹ್ನ ಸುರಿದ ಮಳೆ ಧರೆಗೆ ತಂಪೆರೆಯಿತು. ಜಿಲ್ಲಾ ಕೇಂದ್ರ ಹಾವೇರಿ ನಗರದ ಕೆಲವು ಭಾಗಗಳಲ್ಲಿ ಬೆಳಗ್ಗೆಯೂ ಸ್ವಲ್ಪ ಮಳೆಯಾದರೆ, ಇನ್ನೂ ಕೆಲಭಾಗಗಳಲ್ಲಿ ತುಂತುರು ಮಳೆಯಾಯಿತು. ಮಧ್ಯಾಹ್ನ 12 ಗಂಟೆಯಿಂದ ಬಿಸಿಲಿನ ಝಳ ಹೆಚ್ಚಳವಾಗಿ, ಸಂಜೆ ನಾಲ್ಕು ಗಂಟೆ ಹೊತ್ತಿಗೆ ಮೋಡ ಕವಿದು, ಅರ್ಧ ಗಂಟೆಗಳ ಕಾಲ ಗುಡುಗು, ಗಾಳಿ ಸಹಿತ ಜೋರಾದ ಮಳೆ ಸುರಿಯಿತು. ಬಿಸಿಲ ಬೇಗೆಗೆ ಬಸವಳಿದಿದ್ದ ನಗರದ ಜನತೆಗೆ ತಂಪೆರೆಯಿತು.

ಬೀದಿ ಪಾಲಾದ ತರಕಾರಿ: ಜಿಲ್ಲಾ ಕೇಂದ್ರ ಹಾವೇರಿ ನಗರದಲ್ಲಿ ಸಂತೆ ದಿನವಾಗಿದ್ದ ಗುರುವಾರ ಲಾಲ್ ಬಹದ್ದೂರ ಶಾಸ್ತ್ರಿ ತರಕಾರಿ ಮಾರುಕಟ್ಟೆಯಲ್ಲಿ ಮಧ್ಯಾಹ್ನ ಸುರಿದ ಮಳೆ ಕೆಲಕಾಲ ಫಜೀತಿ ಸೃಷ್ಟಿಸಿತು. ತರಕಾರಿ ಮಾರುಕಟ್ಟೆಗೆ ವಿವಿಧ ಭಾಗಗಳಿಂದ ಆಗಮಿಸಿದ್ದ ವ್ಯಾಪಾರಸ್ಥರು ತರಕಾರಿ, ಬೀದಿ ಬದಿ ವ್ಯಾಪಾರಿಗಳು, ಹಣ್ಣುಮಾರಾಟಗಾರರು ವ್ಯಾಪಾರ ವಹಿವಾಟು ನಡೆಸಲು ತಾಡಪತ್ರಿ ಕಟ್ಟಿಕೊಂಡಿದ್ದರೂ ಜೋರಾದ ಗಾಳಿಗೆ ತಾಡಪತ್ರಿ ಕಿತ್ತುಕೊಂಡವು, ಕೆಲವು ಗಾಳಿಗೆ ಹಾರಿ ಹೋದವು. ಬಳಿಕ ಸುರಿದ ಮಳೆಗೆ ತರಕಾರಿ, ಸೊಪ್ಪು ಮಳೆಯಲ್ಲಿ ತೊಯ್ದು ರಸ್ತೆಯಲ್ಲಿ ತೇಲಾಡಿದವು. ಟೊಮೆಟೋ, ಬದನೆಕಾಯಿ, ಮೆಣಸಿನಕಾಯಿ, ಈರುಳ್ಳಿ ಸೇರಿದಂತೆ ಹಲವು ತರಕಾರಿಗಳು ರಸ್ತೆ ಮೇಲೆ ತೇಲಿ ಚರಂಡಿ ಸೇರಿದವು.

ತುಂತುರು ಮಳೆ: ಇನ್ನೂ ಜಿಲ್ಲೆಯ ಕೆಲವು ಗ್ರಾಮೀಣ ಪ್ರದೇಶದಲ್ಲಿ ಮೋಡ ಮುಸುಕಿದ ವಾತಾವರಣ ಕಂಡು ಬಂದಿದ್ದು, ಬೆಳಗ್ಗೆ ಮತ್ತು ಸಂಜೆ ತುಂತುರು ಮಳೆಯಾಗಿದೆ. ಬೇಸಿಗೆಯಲ್ಲಿ ಕಟಾವು ಮಾಡಿಕೊಂಡು ಬಂದಿದ್ದ ಮೆಕ್ಕೆಜೋಳ ತೆನೆಯ ರಾಶಿಗಳಿಗೆ, ಮೇವಿನ ಬಣವಿಗಳಿಗೆ ತಾಡಪಾತ್ರಿ ಹೊದಿಸಿ ರಕ್ಷಣೆ ಮಾಡಿಕೊಳ್ಳುತ್ತಿದ್ದ ದೃಶ್ಯಗಳು ಕಂಡಬಂದವು.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

• **ಕನ್ನಡಪ್ರಭ ವಾರ್ತೆ** ರಾಣೆಬೆನ್ನೂರು

ನಗರದ ಕಾಕಿ ಜನಸೇವಾ ಸಂಸ್ಥೆ ಹಾಗೂ ಕುರುಹಿನಶೆಟ್ಟಿ ಸೇವಾ ಸಮಾಜ ಸಂಘದ ವತಿಯಿಂದ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 60ಕ್ಕಿಂತಲೂ ಹೆಚ್ಚು ಅಂಕಗಳನ್ನು ಪಡೆದು ಉತ್ತೀರ್ಣರಾದ ತಾಲೂಕಿನ ನೇಕಾರ ಕುರುಹಿನಶೆಟ್ಟಿ ಸಮಾಜದ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಮೇ 20ರ ಒಳಗಾಗಿ ಶಾಲಾ ಅಂಕಪಟ್ಟಿ ದೃಢೀಕರಣ ಪತ್ರ, ಆಧಾರ್ ಕಾರ್ಡ್, ಪಾಸ್‌ಪೋರ್ಟ್ ಫೋಟೋ ಹಾಗೂ ಬ್ಯಾಂಕ್ ಪಾಸ್‌ಬುಕ್ ನಕಲು ಪ್ರತಿಯೊಂದಿಗೆ ಅರ್ಜಿಯನ್ನು ನಗರದ ಕಾಕಿಗಲ್ಲಿಯ ಶ್ರೀ ಅಕ್ಷಯ ಫೈನಾನ್ಸ್ ಕಚೇರಿಯಲ್ಲಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ 9242204056, 8660247699 ಸಂಪರ್ಕಿಸಬಹುದು ಎಂದು ಕಾಕಿ ಜನಸೇವಾ ಸಂಸ್ಥೆ ಅಧ್ಯಕ್ಷ ಶ್ರೀ ನಿವಾಸ ಕಾಕಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂದು ಗಂಗಾಪರಮೇಶ್ವರಿ ಸಮುದಾಯ ಭವನ ಲೋಕಾರ್ಪಣೆ

ಭೂದಾನಿಗಳ ಸಹಕಾರ, ಸರ್ಕಾರದ ಅನುದಾನದಲ್ಲಿ ನಿರ್ಮಾಣ, ದೇಣಿಗೆ ನೀಡಲು ಯೋಜನೆ

• **ಕನ್ನಡಪ್ರಭ ವಾರ್ತೆ** ಹಾನಗಲ್ಲ



ಹದಿನೈದು ವರ್ಷಗಳ ಸುದೀರ್ಘ ಪರಿಶ್ರಮದ ಫಲವಾಗಿ ದಾನಿಗಳು, ಸಮಾಜ ಬಂಧುಗಳ ಸಹಕಾರದಿಂದ ಶ್ರೀ ಗಂಗಾಮತ ಸಮಾಜ ಸೇವಾ ಸಂಸ್ಥೆಯ ಶ್ರೀ ಗಂಗಾಪರಮೇಶ್ವರಿ ಸಮುದಾಯ ಭವನ ಲೋಕಾರ್ಪಣೆಗೊಳ್ಳುತ್ತಿದೆ.

ಚಂದ್ರಾಬಾಯಿ ರಾಮಣ್ಣ ಮಲಗುಂದ ಹಾಗೂ ಚಂದ್ರಕಲಾ ಶಿವಪುತ್ರಪ್ಪ ಶೇಷಗಿರಿ ಅವರು ಭೂದಾನ ಮಾಡಿದ ಎಪಿಎಂಸಿ ಹಿಂಭಾಗದ ಜಾಗದಲ್ಲಿ ಶ್ರೀ ಗಂಗಾಪರಮೇಶ್ವರಿ ಸಮುದಾಯ ಭವನ ಮೇ 8ರಂದು ಬೆಳಗ್ಗೆ 11.30ಕ್ಕೆ ಉದ್ಘಾಟನೆಗೊಳ್ಳಲಿದೆ. ನರಸೀಪುರ ಸುಕ್ಷೇತ್ರದ ಶ್ರೀ ನಿಜಶರಣ ಅಂಬಿಗರ ಚೌಡಯ್ಯ ಗುರುಪೀಠದ ಶಾಂತಭೀಷ್ಮ ಚೌಡಯ್ಯ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಹುಬ್ಬಳ್ಳಿ ಮೂರುಸಾವಿರಮಠದ ಜಗದ್ಗುರು ಡಾ. ಗುರುಸಿದ್ಧರಾಜಯೋಗೀಂದ್ರ ಮಹಾಸ್ವಾಮಿಗಳು ಸಮ್ಮುಖ ವಹಿಸಲಿದ್ದಾರೆ.

ನಾರಾಯಣಗೌಡ ಪಾಟೀಲ ಗಂಗಾಮತ ಸಮುದಾಯದ ತಾಲೂಕು ಅಧ್ಯಕ್ಷರಾಗಿದ್ದ ಸಂದರ್ಭದಲ್ಲಿ ಇಂಥದ್ದೊಂದು ಸಮುದಾಯ ಭವನ ನಿರ್ಮಾಣದ ಕನಸು ಹೊತ್ತು, ಅದೇ ಸಮಯಕ್ಕೆ ಚಂದ್ರಾಬಾಯಿ ರಾಮಣ್ಣ ಮಲಗುಂದ ಅವರು ನೀಡಿದ 15 ಗುಂಟೆ ಹಾಗೂ ಚಂದ್ರಕಲಾ ಶಿವಪುತ್ರಪ್ಪ ಶೇಷಗಿರಿ ಅವರು ನೀಡಿದ 3 ಗುಂಟೆ ಜಾಗದಲ್ಲಿ ಈಗ ಸುಸಜ್ಜಿತ ಸಮುದಾಯ ಭವನ ಲೋಕಾರ್ಪಣೆಯಾಗುತ್ತಿದೆ.

ಅಂದಾಜು ₹2 ಕೋಟಿ ವೆಚ್ಚದಲ್ಲಿ ನಿರ್ಮಾಣವಾದ ಈ ಭವನಕ್ಕೆ ಮೊಟ್ಟಮೊದಲು ಸರ್ಕಾರದ ಅನುದಾನ ₹45 ಲಕ್ಷ ನೀಡಿ ಚಾಲನೆ ಕೊಟ್ಟವರು ಮಾಜಿ ಸಚಿವ ಸಿ.ಎಂ. ಉದಾಸಿ ಅವರಾಗಿದ್ದಾರೆ. ಆನಂತರ ಶಾಸಕರಾಗಿದ್ದ ಮನೋಹರ ತಹಶೀಲ್ದಾರ ಅವರು ₹70 ಲಕ್ಷ ಅನುದಾನ ನೀಡಿದರು. ಈಗಿನ ಶಾಸಕ ಶ್ರೀನಿವಾಸ ಮಾನೆ ಅವರು ₹18 ಲಕ್ಷ ಅನುದಾವನ್ನು ಸರ್ಕಾರದಿಂದ ಕೊಡಿಸಿದ್ದಾರೆ. ವಿಧಾನಪರಿಷತ್ ಮುಖ್ಯ ಸಚೇತಕ ಎನ್. ರವಿಕುಮಾರ, ವಿಧಾನಪರಿಷತ್ ಸದಸ್ಯ ಪ್ರದೀಪ ಶೆಟ್ಟರ ಕೂಡ ಅನುದಾನದ ಭರವಸೆ ನೀಡಿದ್ದಾರೆ.

ಉಚಿತ ಭವನ ಯೋಜನೆ: ಈ ಸಮುದಾಯ ಭವನ ಕೇವಲ ಗಂಗಾಮತ ಸಮುದಾಯಕ್ಕೆ ಮಾತ್ರ ಸೀಮಿತವಾಗದೆ ಎಲ್ಲ ಸಮುದಾಯಗಳ ಸಮಾಜಮುಖಿ ಹಾಗೂ ಮಂಗಲ ಕಾರ್ಯಗಳಿಗೆ ಸೂಕ್ತ ಭವನವಾಗಿದೆ. ಮುಂಗಡವಾಗಿ ₹25 ಸಾವಿರ ದೇಣಿಗೆ ನೀಡಿದವರಿಗೆ ಒಂದು ದಿನದ ಕಾರ್ಯಕ್ರಮ ಅಥವಾ ಮದುವೆ ಮಂಗಲ ಕಾರ್ಯಕ್ಕೆ ಉಚಿತವಾಗಿ ಭವನ ನೀಡುವ ಯೋಜನೆಯಲ್ಲಿ 200 ಜನರಿಗೆ ಅವಕಾಶ ನೀಡಲಾಗಿದೆ. ಈಗಾಗಲೇ 120 ಜನ ವಿವಿಧ ಸಮುದಾಯದವರು ಈ ಯೋಜನೆಯಲ್ಲಿ ಸಹಾಯಹಸ್ತ ನೀಡಿದ್ದರಿಂದ ₹30 ಲಕ್ಷ ಸಂಗ್ರಹವಾಗಿದೆ. ಇನ್ನೂ 70 ಜನರಿಗೆ ಮಾತ್ರ ಇಂಥ ಅವಕಾಶವಿದೆ. ಇದರೊಂದಿಗೆ ಸಮುದಾಯದ ಬಂಧುಗಳು ನಿರಂತರವಾಗಿ ಈ ಸಮುದಾಯ ಭವನಕ್ಕೆ ತನು, ಮನ, ಧನದ ಸಹಾಯ ಸಹಕಾರ ನೀಡಿದ್ದರಿಂದ ₹2 ಕೋಟಿ ವೆಚ್ಚದ ಸಮುದಾಯ ಭವನ ನಿರ್ಮಾಣವಾಗಿದೆ.

ಇದರೊಂದಿಗೆ ಬಡ ಮಕ್ಕಳಿಗೆ ಉಚಿತ ವಿದ್ಯಾರ್ಥಿ ನಿಲಯ ನಿರ್ಮಾಣ, ಸಮುದಾಯದ ವಿದ್ಯಾರ್ಥಿಗಳಿಗೆ ಆರ್ಥಿಕ ಸಹಾಯ ನೀಡುವ ಯೋಜನೆಗಳು ಇದೇ ಸಂಘಟನೆಯಿಂದ ಆರಂಭಿಸುವ ಯೋಜನೆ ಇದೆ.

40 ಸಾವಿರಕ್ಕೂ ಅಧಿಕ ಜನಸಂಖ್ಯೆ ಹೊಂದಿರುವ ಗಂಗಾಮತ ಸಮುದಾಯ ಒಟ್ಟಾಗಿ ಸಮಾಜಮುಖಿಯಾಗಿ ಎಲ್ಲರ ಹಿತ ಕಾಯುವ ಸಮಾಜವಾಗಿ ನಿಲ್ಲಲು ಈ ಭವನ ನಮಗೆ ಕೇಂದ್ರ ಸ್ಥಳ ಎನ್ನುತ್ತಾರೆ ಇದರ ಉಸ್ತುವಾರಿ ಸಂಘಟಕರು.



■ ಲೋಕಾರ್ಪಣೆಗೆ ಸಿದ್ಧವಾದ ಶ್ರೀ ಗಂಗಾಪರಮೇಶ್ವರಿ ಸಮುದಾಯ ಭವನ.
■ ಜನಪ್ರತಿನಿಧಿಗಳು, ವಿವಿಧ ಸಮಾಜದ ಮುಖಂಡರಿಂದ ಸಹಾಯಹಸ್ತ, ₹2 ಕೋಟಿ ವೆಚ್ಚದಲ್ಲಿ ನಿರ್ಮಾಣ

ಈ ಭವನ ನಿರ್ಮಾಣದ ಸಂದರ್ಭದಲ್ಲಿ ಸಮಾಜದ ಹಿರಿಯರಾದ ರಾಮಣ್ಣ ಚಿಕ್ಕಣ್ಣನವರ ಅವರು ಗಂಗಾಮತ ಸಮಾಜ ಸೇವಾ ಸಂಸ್ಥೆ ಟ್ರಸ್ಟ್‌ನ ಮೊದಲ ಅಧ್ಯಕ್ಷರಾಗಿದ್ದರು. ಈಗ ಅನಂತವಿಕಾಸ ನಿಂಗೋಜಿ ಅಧ್ಯಕ್ಷರಾಗಿದ್ದಾರೆ. ಸಹದೇವಪ್ಪ ಚಿಕ್ಕಣ್ಣನವರ ಕಾರ್ಯಾಧ್ಯಕ್ಷರು, ಬಲ್ಲಪ್ಪ ಬಂಕಾಪುರ ಕೋಶಾಧ್ಯಕ್ಷರು, ಅಶೋಕ ಆರೆಗೊಪ್ಪ ಪ್ರಧಾನ ಕಾರ್ಯದರ್ಶಿ, ನಾಗರಾಜ ಬಾರ್ಕಿ ಕಾರ್ಯದರ್ಶಿ, ಭಾಸ್ಕರ ಹುಲಮನಿ, ಭೀಮಣ್ಣ ನಿಂಗೋಜಿ, ಮಂಜು ಕೂಸನೂರ, ಮಂಜುನಾಥ ಪೂಜಾರ, ಶಿವಾನಂದ ಬಂಗಾರಿ, ಮೈಲಾರೆಪ್ಪ ಶೇಷಗಿರಿ, ಸುರೇಶ ಪೂಜಾರ, ಮಂಜುನಾಥ ಕುಂದೂರ ಈಗ ನಿರ್ದೇಶಕರಾಗಿದ್ದಾರೆ.

10ರಂದು ಹೇಮರೆಡ್ಡಿ ಮಲ್ಲಮ್ಮ ಜಯಂತಿ

ಹಾವೇರಿ: ಜಿಲ್ಲಾಡಳಿತ, ಜಿಪಂ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಾವೇರಿ ಜಿಲ್ಲಾ ರೆಡ್ಡಿ ಜನಸಂಘದ ಸಹಯೋಗದಲ್ಲಿ ಮಹಾಸಾಧ್ವಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ ಮೇ 10ರಂದು ಮಧ್ಯಾಹ್ನ 12 ಗಂಟೆಗೆ ಹಾವೇರಿ ನಗರದ ಪ್ರವಾಸಿತಾಣ ಗಾಂಧಿ ಭವನದಲ್ಲಿ ಜರುಗಲಿದೆ. ಹುಕ್ಕೇರಿಮಠದ ಶ್ರೀ ಸದಾಶಿವ ಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಮುಖ್ಯಅತಿಥಿಗಳಾಗಿ ಜನಪ್ರತಿನಿಧಿಗಳು, ಅಧಿಕಾರಿಗಳು ಪಾಲ್ಗೊಳ್ಳುವರು. ಹಿರೇಕೆರೂರು ಸ.ಪ್ರ.ದ. ಕಾಲೇಜಿನ ಉಪನ್ಯಾಸಕ ಡಾ. ಕಾಂತೇಶರೆಡ್ಡಿ ಉಪನ್ಯಾಸಕರಾಗಿ ಭಾಗವಹಿಸಲಿದ್ದು, ವಿಶೇಷ ಆಹ್ವಾನಿತರಾಗಿ ಜಿಲ್ಲಾ ರೆಡ್ಡಿ ಜನಸಂಘದ ಗೌರವಾಧ್ಯಕ್ಷ ವಿ.ಎಂ. ಕಾಮರಡ್ಡಿ ಹಾಗೂ ಕಾರ್ಯದರ್ಶಿ ವಿ.ಜಿ. ದೊಡ್ಡಗೌಡ್ರ ಭಾಗವಹಿಸಲಿದ್ದಾರೆ.

ಸಾಹಿತ್ಯ-ಶಿಕ್ಷಣ-ಸಮಾಜ ಸೇವೆಯ ಸಮನ್ವಯ ಸಾಧಕ

ಪುತ್ತೂರು ಉಮೇಶ್ ನಾಯಕ್

ಪುತ್ತೂರು ಉಮೇಶ್ ನಾಯಕ್ ಅವರು ಸಾಹಿತ್ಯ, ಶಿಕ್ಷಣ ಹಾಗೂ ಸಮಾಜ ಸೇವಾ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಬಹುಮುಖ ವ್ಯಕ್ತಿತ್ವ. ಚಿಂತನೆ, ಕ್ರಿಯಾಶೀಲತೆ ಮತ್ತು ಮಾನವೀಯ ಸೇವಾಭಾವದ ಮೂಲಕ ಪುತ್ತೂರು ತಾಲೂಕು ಮಾತ್ರವಲ್ಲದೆ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ವಿಶಿಷ್ಟ ಗುರುತನ್ನು ನಿರ್ಮಿಸಿಕೊಂಡಿರುವ ಅವರು, ಸಮಾಜದ ವಿವಿಧ ಹಂತಗಳ ಮೇಲೆ ಸ್ಪಷ್ಟವಾದ ಸಕಾರಾತ್ಮಕ ಪ್ರಭಾವ ಬೀರಿರುವ ಸೇವಾ ಸಾಧಕರು.



ಪ್ರಸ್ತುತ ಪುತ್ತೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿರುವ ಅವರು, ಕಳೆದ ನಾಲ್ಕು ವರ್ಷಗಳಿಂದ ತಾಲೂಕಿನ 32 ಗ್ರಾಮಗಳಲ್ಲಿ ಪ್ರತಿಮಾಸವೂ ಮಕ್ಕಳ ಸಾಹಿತ್ಯ ಸಮ್ಮೇಳನದ ಸ್ವರೂಪದ ಗ್ರಾಮ ಸಾಹಿತ್ಯ ಸಂಭ್ರಮ ಎಂಬ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತಿದ್ದಾರೆ. ಗ್ರಾಮ ಸಾಹಿತ್ಯ ಸಂಭ್ರಮದಲ್ಲಿ ವಿದ್ಯಾರ್ಥಿ ಕವಿ ಗೋಷ್ಠಿ ಜೊತೆಗೆ ವಿನೂತನ ಪ್ರಯೋಗಗಳಾದ ಬಾಲಕಥಾಗೋಷ್ಠಿ, ಪ್ರವಾಸ ಕಥನ ಲೇಖನ, ನನ್ನ ಆಪ್ತಮಿತ್ರ ಲೇಖನ, ನನ್ನ ನೆಚ್ಚಿನ ಶಿಕ್ಷಕ ಲೇಖನ ಗೋಷ್ಠಿಗಳನ್ನು ಅಳವಡಿಸಿಕೊಂಡು ಯುವ ಜನತೆಯನ್ನು ಸಾಹಿತ್ಯ ಕ್ಷೇತ್ರದತ್ತ ಬರಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. 250ಕ್ಕೂ ಹೆಚ್ಚು ವಿವಿಧ ಕ್ಷೇತ್ರಗಳ ಸಾಧಕರನ್ನು ಗ್ರಾಮ ಮಟ್ಟದಲ್ಲಿ ಗುರುತಿಸಿ ಗೌರವಿಸಿದ್ದಾರೆ. 100ಕ್ಕೂ ಅಧಿಕ ಹೊಸ ಕೃತಿಗಳ ಪ್ರಕಟಣೆಗೆ ಮಾರ್ಗದರ್ಶನ ನೀಡಿ ಉದಯೋನ್ಮುಖ ಸಾಹಿತಿಗಳಿಗೆ ಬೆಂಬಲ ನೀಡಿದ್ದಾರೆ.

ಪುತ್ತೂರು ತಾಲೂಕಿನಲ್ಲಿ ಸುಮಾರು 20 ವರ್ಷಗಳಿಂದ ನಿಂತುಹೋದ ಕರ್ನಾಟಕ ರಾಜ್ಯೋತ್ಸವದ ಕನ್ನಡ ಭುವನೇಶ್ವರಿಯ ಭವ್ಯ ಮೆರವಣಿಗೆಯನ್ನು ಪುತ್ತೂರಿನ ಶಾಸಕರಾದ ಅಶೋಕ್ ರೈ ಯವರ ಮಾರ್ಗದರ್ಶನದಲ್ಲಿ ಸುಮಾರು 50ಕ್ಕೂ ಹೆಚ್ಚು ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಪುನರಾರಂಭಿಸಿ, ರಾಜ್ಯೋತ್ಸವದ ಅಂಗವಾಗಿ ನಡೆಯುವ ಸನ್ಮಾನವನ್ನು ತಾಲೂಕು ರಾಜ್ಯೋತ್ಸವ ಪ್ರಶಸ್ತಿ ಸ್ವರೂಪಕ್ಕೆ ತಂದ ಪ್ರಮುಖ ವ್ಯಕ್ತಿ. ಜಿಲ್ಲೆಯಲ್ಲಿ ತಾಲೂಕು ಮಟ್ಟದಲ್ಲಿ ರಾಜ್ಯೋತ್ಸವ ಪ್ರಶಸ್ತಿ ವ್ಯವಸ್ಥಿತವಾಗಿ ನಡೆಯುತ್ತಿರುವುದು ಪುತ್ತೂರಿನಲ್ಲಿ ಮಾತ್ರ ಎನ್ನುವುದು ಗಮನಾರ್ಹ.



ಕನ್ನಡಪ್ರಭ ಮತ್ತು ಸುವರ್ಣ ನ್ಯೂಸ್ ವತಿಯಿಂದ ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ 'ಸುವರ್ಣ ಕನ್ನಡಿಗ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕನ್ನಡದಲ್ಲೂ ಐಎಎಸ್ ಬರೆಯಿರಿ' ಅಭಿಯಾನ

ಶಿಕ್ಷಣ ಕ್ಷೇತ್ರದಲ್ಲಿ ಇವರ ಕೊಡುಗೆ ವಿಶೇಷವಾಗಿದೆ. ಕನ್ನಡ ಮಾಧ್ಯಮ ವಿದ್ಯಾರ್ಥಿಗಳ ಸ್ಪರ್ಧಾತ್ಮಕ ಭವಿಷ್ಯವನ್ನು ಗಮನದಲ್ಲಿರಿಸಿ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಐಎಎಸ್ ಅಧಿಕಾರಿಗಳಾಗಬೇಕೆಂಬ ಮಹಾದಾಸೆಯಿಂದ ಕನ್ನಡದಲ್ಲೂ ಐಎಎಸ್ ಪರೀಕ್ಷೆ ಬರೆಯಿರಿ ಎಂಬ ಅಭಿಯಾನವನ್ನು ಆರಂಭಿಸಿ, 200ಕ್ಕೂ ಅಧಿಕ ಐಎಎಸ್- ಐಪಿಎಸ್ ಹಾಗೂ ತತ್ಸಮಾನ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಮಾಹಿತಿ ಕಾರ್ಯಾಗಾರಗಳನ್ನು ಕನ್ನಡದಲ್ಲೇ ನಡೆಸಿ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಅರಿವನ್ನುಂಟು ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.

ಗ್ರಾಮಮಟ್ಟದಲ್ಲಿ ಸಾಹಿತ್ಯ ಸಂಭ್ರಮ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ಜಾಗೃತಿ ಕಾರ್ಯಕ್ರಮಗಳನ್ನು ಸಂಯೋಜಿತವಾಗಿ ನಡೆಸಿರುವುದು ರಾಜ್ಯದ ಕನ್ನಡ ಸಾಹಿತ್ಯ ಪರಿಷತ್ತು ಇತಿಹಾಸದಲ್ಲೇ ವಿನೂತನ ಪ್ರಯತ್ನವಾಗಿದೆ.

ಸಾಹಿತ್ಯ ಕ್ಷೇತ್ರದಲ್ಲಿ ಅವರು ಸಾಧಕ ಲೇಖಕರಾಗಿಯೂ ಗುರುತಿಸಿಕೊಂಡಿದ್ದಾರೆ. ಇತಿಹಾಸ ಪ್ರಸಿದ್ಧ ಪುತ್ತೂರು ಶ್ರೀ ಮಹಾಲಿಂಗೇಶ್ವರ ದೇವಸ್ಥಾನದ ಸಂಕ್ಷಿಪ್ತ ಸ್ಥಳಪುರಾಣವಾದ ಸ್ವಯಂಭೂ ಮಹಾಲಿಂಗೇಶ್ವರ ಕೃತಿಯನ್ನು ರಚಿಸಿದ್ದು, ಈ ಕೃತಿ ಧಾರ್ಮಿಕ ದತ್ತಿ ಇಲಾಖೆಯಿಂದ ಪ್ರಕಟವಾಗಿದೆ. ಇದಲ್ಲದೆ ಇನ್ನೂ ಮೂರು ಕೃತಿಗಳನ್ನು ರಚಿಸಿ ಕನ್ನಡ ಸಾಹಿತ್ಯಕ್ಕೆ ತಮ್ಮ ಕೊಡುಗೆಯನ್ನು ನೀಡಿದ್ದಾರೆ.

ನಿರ್ಗತಿಕರ ಪುನರ್ವಸತಿ ಸೇವೆ: ಪುತ್ತೂರು ಉಮೇಶ್ ನಾಯಕ್ ಅವರ ಸೇವಾ ಬದುಕಿನ ಅತ್ಯಂತ ಸ್ಪರ್ಶಕ ಅಧ್ಯಾಯವೆಂದರೆ ನಿರ್ಗತಿಕರು, ಭಿಕ್ಷುಕರು ಮತ್ತು ಅನಾಥರ ಪುನರ್ವಸತಿ ಕಾರ್ಯ. ಕಳೆದ ಹತ್ತು ವರ್ಷಗಳಲ್ಲಿ 100ಕ್ಕೂ ಅಧಿಕ ನಿರ್ಗತಿಕರನ್ನು ಪುನರ್ವಸತಿ ಕೇಂದ್ರಗಳಿಗೆ ಸೇರಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಸಂಕಲ್ಪದೊಂದಿಗೆ ಅವರಿಗೆ ಹೊಸ ಬದುಕಿನ ಆಶಾಕಿರಣ ನೀಡಿದ್ದಾರೆ. ವಿಶೇಷವಾಗಿ ಎಚ್‌ಐವಿ ಪೀಡಿತ ಓರ್ವ ಮಹಿಳೆ ಹಾಗೂ ಇಬ್ಬರು ಮಕ್ಕಳನ್ನು ರಕ್ಷಿಸಿ, ಅವರಿಗೆ ವೈದ್ಯಕೀಯ ನೆರವು, ಆಶ್ರಯ ಮತ್ತು ವಿದ್ಯಾಭ್ಯಾಸದ ವ್ಯವಸ್ಥೆ ಕಲ್ಪಿಸಿರುವುದು ಇವರ ಮಾನವೀಯತೆಯ ಮಾದರಿಯಾಗಿದೆ.

ಗೌರವಗಳು :
ಇವರ ಸಾಹಿತ್ಯಿಕ, ಶೈಕ್ಷಣಿಕ ಹಾಗೂ ಸಮಾಜಮುಖಿ ಸೇವೆಗಳನ್ನು ಗುರುತಿಸಿ 2020ರಲ್ಲಿ ರೋಟರಿ ಅನ್ಸಂಗ್ ಹೀರೋ ಪ್ರಶಸ್ತಿ ಹಾಗೂ 2025ರಲ್ಲಿ ಪುತ್ತೂರು ತಾಲೂಕು ಗಣರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಇತ್ತೀಚೆಗೆ ಕನ್ನಡಪ್ರಭ ಏಷಿಯಾನೆಟ್ ಸುವರ್ಣನ್ಯೂಸ್‌ನ ಸುವರ್ಣ ಕನ್ನಡಿಗ' ಪ್ರಶಸ್ತಿಗೆ ಭಾಜನರಾಗಿದ್ದು, ಇವರ ಸಮಾಜಸೇವೆಗೆ ದೊರೆತ ಮುಕುಟವಾಗಿದೆ.

ತಮ್ಮ ಒಡಹುಟ್ಟಿದ ಡೌನ್ ಸಿಂಡ್ರೋಮ್ ಸಹೋದರ ಸುರೇಶ್ ನಾಯಕ್ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರುವಲ್ಲಿ ಹಾಗೂ ಅವರಿಗೆ ಜಾದೂ ಪ್ರರ್ಶನ ಕಲಿಸಿ ಅವರ ಪ್ರತಿಭೆಯನ್ನು ಪ್ರಪಂಚಕ್ಕೆ ತೋರಿಸಿಕೊಟ್ಟಿದ್ದಾರೆ. ಅವರು ದೇಶದಾದ್ಯಂತ ಇದುವರೆಗೆ 500ಕ್ಕೂ ಅಧಿಕ ಉಚಿತ ಪ್ರದರ್ಶನಗಳ ಮೂಲಕ ಬುದ್ಧಿಮಾಂದ್ಯತಾ ಜನಜಾಗೃತಿಯನ್ನು ಮೂಡಿಸಿದ್ದಾರೆ. ಉಡುಪಿಯ ಡೌನ್ ಸಿಂಡ್ರೋಮ್ ಈಜುಗಾರ್ತಿ ಅರ್ಚನಾ ಜೈ ವಿಠ್ಠಲ್, ಮೈಸೂರಿನ ದಿವ್ಯಾಂಗ ಕೀ ಬೋರ್ಡ್ ಕಲಾವಿದ ಶ್ರೀ ಗಣೇಶ್ ಭಟ್ ಹಾಗೂ ಡೌನ್ ಸಿಂಡ್ರೋಮ್ ಜಾದೂಗಾರ ಸುರೇಶ ನಾಯಕ್ ಇವರಿಗೆ ವಿಶ್ವ ಅಂಗವಿಕಲ ದಿನಾಚರಣೆಯ ರಾಷ್ಟ್ರಪತಿಗಳ ರಾಷ್ಟ್ರ ಪ್ರಶಸ್ತಿ ದೊರಕುವಲ್ಲಿ ಮಹತ್ತರ ಪಾತ್ರ ವಹಿಸಿದ್ದಾರೆ.

ಪ್ರಸ್ತುತ ಅವರು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನಲ್ಲಿ ಶ್ರೀರಾಮ್ ಶೇರ್ಸ್ ಅಂಡ್ ಫೈನಾನ್ಷಿಯಲ್ ಕನ್ಸಲ್ಟೆಂಟ್ ಎಂಬ ಸಂಸ್ಥೆಯ ಆಡಳಿತ ನಿರ್ದೇಶಕರಾಗಿದ್ದು, ಈ ಸಂಸ್ಥೆಯ ಮೂಲಕ ಶೇರು ಉದ್ಯಮವನ್ನು ನಡೆಸುತ್ತಿದ್ದಾರೆ. ಪತ್ನಿ ರೂಪಶ್ರೀ ನಾಯಕ್, ಪುತ್ರ ಸಾತ್ವಿಕ್ ನಾಯಕ್ ಹಾಗೂ ಸಹೋದರ ಸುರೇಶ್ ನಾಯಕ್ ಹಾಗೂ ಪೋಷಕರೊಂದಿಗೆ ಪುತ್ತೂರಿನಲ್ಲಿ ವಾಸವಾಗಿದ್ದಾರೆ (ದೂರವಾಣಿ: 9844401295).

ಕನ್ನಡಪ್ರಭ
ಶುಕ್ರವಾರ 8.05.2026

ಗರಿಷ್ಠ 35°C | ಕನಿಷ್ಠ 26°C

ಸುದ್ದಿ ಸಿಂಚನ

ಅಗ್ನಿ ಅವಘಡ, ಪ್ರಥಮ ಚಿಕಿತ್ಸೆ ಕುರಿತು ಅಣಕು ಪ್ರದರ್ಶನ

ರಾಣೆಬೆನ್ನೂರು: ಗೃಹರಕ್ಷಕ ದಳ ಮತ್ತು ಅಗ್ನಿಶಾಮಕ ದಳ ವತಿಯಿಂದ ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ಗುರುವಾರ ಸಾರ್ವಜನಿಕರಿಗೆ ಅಗ್ನಿ ಅವಘಡಗಳು ಮತ್ತು ಪ್ರಥಮ ಚಿಕಿತ್ಸೆ ಕುರಿತು ಅಣಕು ಪ್ರದರ್ಶನ ನಡೆಸಲಾಯಿತು. ಜಿಲ್ಲಾ ಗೃಹರಕ್ಷಕದಳದ ಜಿಲ್ಲಾ ಸಮಾದೇಷ್ಟ ಪ್ರಮೋದ ನಲವಾಗಲ, ಜಿಲ್ಲಾ ಬೋಧಕ ಟಿ.ಎ. ಬದಾಮಿ, ಸ್ಥಳೀಯ ಘಟಕದ ಪ್ರಭಾರ ಘಟಕಾಧಿಕಾರಿ ಕೆ.ಸಿ. ರಮೇಶ, ಸಾರ್ವಜನಿಕ ಆಸ್ಪತ್ರೆಯ ವೈದ್ಯರು, ಸಿಬ್ಬಂದಿ ಹಾಗೂ ಸ್ಥಳೀಯ ಘಟಕದ ಗೃಹ ರಕ್ಷಕರು, ಗೃಹ ರಕ್ಷಕಿಯರು ಇದ್ದರು.

- ಗೃಹರಕ್ಷಕ ದಳ ಮತ್ತು ಅಗ್ನಿಶಾಮಕ ದಳ ವತಿಯಿಂದ ಕಾರ್ಯಕ್ರಮ
- ಸಾರ್ವಜನಿಕರಲ್ಲಿ ಜಾಗೃತಿ
- ಅಧಿಕಾರಿಗಳು ಭಾಗಿ

ಪರೀಕ್ಷಾ ಟಾಪರ್ಸ್ ವಿದ್ಯಾರ್ಥಿಗಳಿಗೆ ಇಂದು ಪುರಸ್ಕಾರ

ಹಾನಗಲ್ಲ: ಇಲ್ಲಿನ ಪಿಎಂಶ್ರೀ ಶಾಸಕರ ಮಾದರಿ ಶಾಲೆಯ ಆವರಣದಲ್ಲಿ ಮೇ 9ರಂದು ಬೆಳಗ್ಗೆ 9.30ಕ್ಕೆ ಶಾಸಕ ಶ್ರೀನಿವಾಸ ಮಾನೆ ಅವರ ನೇತೃತ್ವದಲ್ಲಿ ಎಸ್ಎಸ್ಎಲ್‌ಸಿಯಿಂದ ಸ್ನಾತಕೋತ್ತರ ಪದವಿ ವರೆಗಿನ ಪರೀಕ್ಷಾ ಟಾಪರ್ಸ್ ವಿದ್ಯಾರ್ಥಿಗಳಿಗೆ 3ನೇ ವರ್ಷದ ''ಸಾಧನೆ ಸಂಭ್ರಮ'' ಸಾಧಕ ವಿದ್ಯಾರ್ಥಿಗಳಿಗೆ ಪುರಸ್ಕಾರ ಸಮಾರಂಭ ಆಯೋಜಿಸಲಾಗಿದೆ. ಎಸ್ಎಸ್ಎಲ್‌ಸಿ, ದ್ವಿತೀಯ ಪಿಯುಸಿ, ಬಿಇಡಿ, ಸ್ನಾತಕೋತ್ತರ ಪದವಿ, ಎನ್ಎಂಎಂಎಸ್ ಪರೀಕ್ಷೆಗಳಲ್ಲಿ ಸಾಧನೆ ತೋರಿದ ತಾಲೂಕಿನ 400ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ₹5 ಲಕ್ಷಕ್ಕೂ ಅಧಿಕ ನಗದು ಬಹುಮಾನದೊಂದಿಗೆ ಪುರಸ್ಕರಿಸಲಾಗುವುದು. ಶಾಸಕ ಶ್ರೀನಿವಾಸ ಮಾನೆ ಪುರಸ್ಕಾರ ನೀಡಲಿದ್ದು, ಪರಿವರ್ತನ ಕಲಿಕಾ ಕೇಂದ್ರದ ಅಧ್ಯಕ್ಷೆ ಸ್ವಾತಿ ಮಾಳಗಿ, ಆಡಳಿತಾಧಿಕಾರಿ ಮಾರುತಿ ಶಿಡ್ಲಾಪೂರ, ರಾಣೆಬೆನ್ನೂರಿನ ಸಂಜೀವಿನಿ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಪ್ರಭುಲಿಂಗ ಕೋಡದ, ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವಿ. ಚಿನ್ನಿಕಟ್ಟಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

ವೃದ್ಧ ಕಾಣೆ

ಹಾವೇರಿ: ತಾಲೂಕಿನ ಕೆರಿಮತ್ತಿಹಳ್ಳಿ ಗ್ರಾಮದ 70 ವರ್ಷದ ವೃದ್ಧ ಮಹದೇವಪ್ಪ ಕಲ್ಲಪ್ಪ ಭಜಂತ್ರಿ ಇತ್ತೀಚೆಗೆ ಮನೆಯಿಂದ ಹೋದವನು ಮರಳಿ ಬಾರದೆ ಕಾಣೆಯಾಗಿರುವುದಾಗಿ ಹಾವೇರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ. ಕಾಣೆಯಾದ ವ್ಯಕ್ತಿ 5.6 ಅಡಿ ಎತ್ತರ, ಕೋಲುಮುಖ, ಗೋದಿಕೆಂಪು ಮೈಬಣ್ಣ ತೆಳ್ಳನೆ ಮೈಕಟ್ಟು ಹೊಂದಿದ್ದು, ಬಿಳಿ ಬಣ್ಣದ ಅಂಗಿ, ನೀಲಿ ಬಣ್ಣದ ಚೆಕ್ಸ್ ಲುಂಗಿ ಧರಿಸಿದ್ದಾನೆ. ಈ ವ್ಯಕ್ತಿಯ ಮಾಹಿತಿ ಲಭ್ಯವಾದಲ್ಲಿ ಹಾವೇರಿ ಪೊಲೀಸ್ ಕಂಟ್ರೋಲ್ ರೂಂ 08375-100, ಹಾವೇರಿ ಸಿಪಿಐ ಗ್ರಾಮೀಣ ವೃತ್ತ ದೂರವಾಣಿ ಸಂಖ್ಯೆ 08375-232493, ಹಾವೇರಿ ಪಿಎಸ್ಐ ಗ್ರಾಮೀಣ ವೃತ್ತ 08375-233333, ಮೊ.9480804546 ಸಂಪರ್ಕಿಸಬಹುದೆಂದು ಹಾವೇರಿ ಗ್ರಾಮೀಣ ಪೊಲೀಸ್ ಠಾಣೆ ಠಾಣಾಧಿಕಾರಿಗಳು ತಿಳಿಸಿದ್ದಾರೆ.

ಪೇಟೆ ಧಾರಣೆ

■ ರಾಣೆಬೆನ್ನೂರು ಕೃಷಿ ಉತ್ಪನ್ನ ಮಾರುಕಟ್ಟೆ

ಉತ್ಪನ್ನಗಳು	ಕನಿಷ್ಠ	ಗರಿಷ್ಠ
ಹತ್ತಿ	3770	8570
ಶೇಂಗಾ	3030	6090
ಮೆಕ್ಕೆಜೋಳ	1900	1900



ರಾಣೆಬೆನ್ನೂರ ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ಸಾರ್ವಜನಿಕರಿಗೆ ಅಗ್ನಿ ಅವಘಡಗಳು ಮತ್ತು ಪ್ರಥಮ ಚಿಕಿತ್ಸೆಗಳ ಕುರಿತು ಅಣಕು ಪ್ರದರ್ಶನ ನಡೆಸಲಾಯಿತು. ಜಿಲ್ಲಾ ಗೃಹರಕ್ಷಕದಳದ ಜಿಲ್ಲಾ ಸಮಾದೇಷ್ಟ ಪ್ರಮೋದ ನಲವಾಗಲ, ಜಿಲ್ಲಾ ಬೋಧಕ ಟಿ.ಎ. ಬದಾಮಿ ಇದ್ದರು.



ರಾಣೆಬೆನ್ನೂರು ತಾಲೂಕಿನ ಚಳಗೇರಿ ಗ್ರಾಮದ ರೈಲ್ವೆ ನಿಲ್ದಾಣ ರಸ್ತೆಯ ಪಕ್ಕದ ಬೀರಲೀಗೇಶ್ವರ ದೇವಸ್ಥಾನದ ಸಮೀಪದಲ್ಲಿ ನಿರ್ಮಿಸಿರುವ ಮಹರ್ಷಿ ವಾಲ್ಮೀಕಿ ಋಷಿಗಳ ದೇವಸ್ಥಾನದಲ್ಲಿ ಪ್ರತಿಷ್ಠಾಪಿಸುವ ಮೂರ್ತಿಯ ಮೆರವಣಿಗೆ ಬುಧವಾರ ಗ್ರಾಮದ ಪ್ರಮುಖ ಬೀದಿಗಳಲ್ಲಿ ನಡೆಯಿತು.

ಮಹರ್ಷಿ ವಾಲ್ಮೀಕಿ ಮೂರ್ತಿ ಮೆರವಣಿಗೆ

• **ಕನ್ನಡಪ್ರಭ ವಾರ್ತೆ** ಕುಮಾರಪಟ್ಟಣ

ತಾಲೂಕಿನ ಚಳಗೇರಿ ಗ್ರಾಮದ ರೈಲ್ವೆ ನಿಲ್ದಾಣ ರಸ್ತೆಯ ಪಕ್ಕದ ಬೀರಲೀಗೇಶ್ವರ ದೇವಸ್ಥಾನದ ಸಮೀಪದಲ್ಲಿ ನಿರ್ಮಿಸಿರುವ ಮಹರ್ಷಿ ವಾಲ್ಮೀಕಿ ಋಷಿಗಳ ನೂತನ ದೇವಸ್ಥಾನದ ಉದ್ಘಾಟನೆ ಮತ್ತು ಶ್ರೀ ಮಹರ್ಷಿ ವಾಲ್ಮೀಕಿ ಋರ್ಷಿಗಳ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಹಾಗೂ ಧರ್ಮಸಭೆ ಮೇ 8ರಂದು ನಡೆಯಲಿದೆ. ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಅವರು ದೇವಸ್ಥಾನ ಉದ್ಘಾಟಿಸುವರು. ವೇದಿಕೆ ಕಾರ್ಯಕ್ರಮವನ್ನು ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಉದ್ಘಾಟಿಸುವರು. ಶಾಸಕ ಪ್ರಕಾಶ್ ಕೋಳಿವಾಡ ಅಧ್ಯಕ್ಷತೆ ವಹಿಸುವರು. ಧರ್ಮಸಭೆಯ ಸಾನ್ನಿಧ್ಯವನ್ನು ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಪ್ರಸನ್ನಾನಂದಪುರಿ ಮಹಾಸ್ವಾಮಿಗಳು, ಕಾಗಿನೆಲೆ ಮಹಾ ಸಂಸ್ಥಾನ ಕನಕಗುರು ಪೀಠದ ನಿರಂಜನಾನಂದಪುರಿ ಮಹಾಸ್ವಾಮಿಗಳು, ಸಾಣೆಹಳ್ಳಿ ತರಳಬಾಳು ಜಗದ್ಗುರು ಶಾಖಾಮಠದ ಪಟ್ಟಾಧ್ಯಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು, ಗುರು ನಾಗರಾಜಾನಂದ ಸ್ವಾಮಿಗಳು, ಶಿವಲಿಂಗ ಶಿವಚಾರ್ಯ ಮಹಾಸ್ವಾಮಿಗಳು, ಗುರು ಬಸವ ಮಹಾಸ್ವಾಮಿಗಳು ವಹಿಸಲಿದ್ದಾರೆ.

ಜಿಲ್ಲೆಯಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಗೆ ವೇಗ

8600ಕ್ಕೂ ಅಧಿಕ ಕೂಲಿಕಾರರಿಂದ ವಿವಿಧ ಕಾಮಗಾರಿ, 26ಕ್ಕೂ ಅಧಿಕ ಕಾಮಗಾರಿ



ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ನರೇಗಾ)ಯಡಿ ಕೈಗೊಂಡ ವಿವಿಧ ಕಾಮಗಾರಿಗಳು (ಸಾಂದರ್ಭಿಕ ಚಿತ್ರ).

ಮಹಾತ್ಮಾ ಗಾಂಧಿ ನರೇಗಾ ಯೋಜನೆ ಕೇವಲ ಉದ್ಯೋಗ ನೀಡುವ ಯೋಜನೆಯಷ್ಟೇ ಅಲ್ಲದೇ, ಗ್ರಾಮೀಣ ಪ್ರದೇಶದಲ್ಲಿ ಶಾಶ್ವತ ಆಸ್ತಿ ನಿರ್ಮಾಣದ ಮೂಲಕ ಅಭಿವೃದ್ಧಿಗೆ ದಾರಿ ಮಾಡಿಕೊಡುವ ಮಹತ್ವದ ಕಾರ್ಯಕ್ರಮವಾಗಿದೆ. ನೀರಿನ ಸಂರಕ್ಷಣೆ, ಕೃಷಿ ಅಭಿವೃದ್ಧಿ ಹಾಗೂ ಪರಿಸರ ಸಂರಕ್ಷಣೆಗೂ ಈ ಯೋಜನೆ ಪೂರಕವಾಗಿದೆ. ಹೀಗಾಗಿ ರೈತರು ಮತ್ತು ಗ್ರಾಮೀಣ ಕಾರ್ಮಿಕರಿಗೆ ದೀರ್ಘಕಾಲೀನ ಲಾಭ ದೊರೆಯುತ್ತಿದೆ. ಜಿಲ್ಲೆಯಲ್ಲಿ ಯೋಜನೆಯ ಅನುಷ್ಠಾನವನ್ನು ಮತ್ತಷ್ಟು ಬಲಪಡಿಸಲು ಅಧಿಕಾರಿಗಳು ನಿರಂತರ ಪರಿಶೀಲನೆ ನಡೆಸುತ್ತಿದ್ದು, ಅರ್ಹ ಕುಟುಂಬಗಳೆಲ್ಲರೂ ಯೋಜನೆಯ ಪ್ರಯೋಜನ ಪಡೆಯುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

• **ಡಾ. ಪುನೀತ್** ಉಪ ಕಾರ್ಯದರ್ಶಿ, ಜಿಪಂ ಹಾವೇರಿ

• **ಕನ್ನಡಪ್ರಭ ವಾರ್ತೆ** ಹಾವೇರಿ

ಜಿಲ್ಲೆಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ನರೇಗಾ) ಪರಿಣಾಮಕಾರಿಯಾಗಿ ಜಾರಿಯಾಗುತ್ತಿದ್ದು, ಗ್ರಾಮೀಣ ಪ್ರದೇಶದ ಕೂಲಿಕಾರರಿಗೆ ಸ್ಥಳೀಯ ಮಟ್ಟದಲ್ಲೇ ಉದ್ಯೋಗಾವಕಾಶಗಳನ್ನು ಒದಗಿಸುವ ಮೂಲಕ ಗ್ರಾಮೀಣ ಆರ್ಥಿಕತೆಗೆ ಬಲ ತುಂಬಲಾಗುತ್ತಿದೆ ಎಂದು ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಡಾ. ಪುನೀತ್ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲೆಯ 223 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಈಗಾಗಲೇ 8,600ಕ್ಕೂ ಅಧಿಕ ಕೂಲಿಕಾರರು ವಿವಿಧ ಕಾಮಗಾರಿಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಗ್ರಾಮಸ್ಥರಿಗೆ ಊರಿನಲ್ಲೇ ಕೆಲಸ ಲಭ್ಯವಾಗುತ್ತಿರುವುದರಿಂದ ವಲಸೆ ಕಡಿಮೆಯಾಗುವ ಜತೆಗೆ ಕುಟುಂಬಗಳ ಆರ್ಥಿಕ ಸ್ಥಿತಿಗೂ ನೆರವಾಗುತ್ತಿದೆ ಎಂದು ಹೇಳಿದ್ದಾರೆ.

100 ದಿನಗಳ ಉದ್ಯೋಗ: ನರೇಗಾ ಯೋಜನೆಯ ಮುಖ್ಯ ಉದ್ದೇಶ ಗ್ರಾಮೀಣ ಕುಟುಂಬಗಳಿಗೆ ವರ್ಷಕ್ಕೆ ಕನಿಷ್ಠ 100 ದಿನಗಳ ಕೂಲಿ ಆಧಾರಿತ ಉದ್ಯೋಗ ಒದಗಿಸುವುದಾಗಿದೆ. ಹಾವೇರಿ ಜಿಲ್ಲೆಯಲ್ಲಿ ಈ ಯೋಜನೆಯಡಿ ಕೆರೆ ಅಭಿವೃದ್ಧಿ, ಮಳೆನೀರು ಸಂಗ್ರಹಣೆ, ತೋಟಗಾರಿಕೆ, ಹಳ್ಳಿಗಳ ರಸ್ತೆ ಅಭಿವೃದ್ಧಿ, ಶಾಲಾ ಆವರಣ ಸುಧಾರಣೆ, ಅಂಗನವಾಡಿ ಕಟ್ಟಡ ಸುತ್ತಮುತ್ತಲಿನ ಕಾಮಗಾರಿಗಳು, ನೀರು ಹರಿವಿನ ಕಾಲುವೆಗಳ ನಿರ್ಮಾಣ, ಗದ್ದೆ ಬದು ನಿರ್ಮಾಣ ಸೇರಿದಂತೆ ಹಲವು ಶಾಶ್ವತ ಆಸ್ತಿ ನಿರ್ಮಾಣ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ.

26 ಸಾವಿರಕ್ಕೂ ಅಧಿಕ ಕಾಮಗಾರಿ: ಜಿಲ್ಲೆಯಲ್ಲಿ ಈಗಾಗಲೇ 26,000ಕ್ಕೂ ಅಧಿಕ ಕಾಮಗಾರಿಗಳಿಗೆ ಅನುಮೋದನೆಗೊಂಡಿದ್ದು, ಹಂತ ಹಂತವಾಗಿ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಕಾಮಗಾರಿಗಳನ್ನು ಆರಂಭಿಸಲಾಗುತ್ತಿದೆ. ಉದ್ಯೋಗಕ್ಕಾಗಿ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಬೇಡಿಕೆ ಸಲ್ಲಿಸಲು ಅವಕಾಶವಿದ್ದು, ವಿಶೇಷವಾಗಿ ಮಹಿಳಾ ಕೂಲಿಕಾರರು, ಹಿರಿಯ ನಾಗರಿಕರು ಹಾಗೂ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ಈ ಯೋಜನೆ ಜೀವನೋಪಾಯದ ಪ್ರಮುಖ ಆಧಾರವಾಗುತ್ತಿದೆ.

ಪ್ರಸ್ತುತ ನರೇಗಾ ಯೋಜನೆಯಡಿ ಕೆಲಸ ನಿರ್ವಹಿಸುವ ಕೂಲಿಕಾರರಿಗೆ ಪ್ರತಿದಿನ ₹370 ಕೂಲಿ ನೀಡಲಾಗುತ್ತಿದೆ. ಸರ್ಕಾರದಿಂದ ನಿಗದಿಪಡಿಸಿದ ಈ ಕೂಲಿ ಮೊತ್ತ ನೇರವಾಗಿ ಕಾರ್ಮಿಕರ ಬ್ಯಾಂಕ್ ಖಾತೆಗೆ ಜಮೆಯಾಗುವುದರಿಂದ ಪಾರದರ್ಶಕತೆ ಮತ್ತು ಭದ್ರತೆ ಹೆಚ್ಚಿದೆ. ಗ್ರಾಮೀಣ ಪ್ರದೇಶದ ಜನರು ತಮ್ಮ ಊರಿನಲ್ಲಿಯೇ ಕೆಲಸ ಮಾಡಿ ಆದಾಯ ಗಳಿಸುವ ಮೂಲಕ ಕುಟುಂಬದ ಖರ್ಚುಗಳನ್ನು ನಿರ್ವಹಿಸಲು ಹಾಗೂ ಮಕ್ಕಳ ಶಿಕ್ಷಣ, ಆರೋಗ್ಯ ಸೇರಿದಂತೆ ಅನೇಕ ಅಗತ್ಯಗಳನ್ನು ಪೂರೈಸಿಕೊಳ್ಳಲು ನೆರವಾಗುತ್ತಿದೆ.

ಕೂಲಿಕಾರರು ತಮ್ಮ ಗ್ರಾಮ ಪಂಚಾಯಿತಿಯಲ್ಲಿ ನಮೂನೆ-6 ಸಲ್ಲಿಸುವ ಮೂಲಕ ಉದ್ಯೋಗಕ್ಕಾಗಿ ಬೇಡಿಕೆ ಸಲ್ಲಿಸಬಹುದಾಗಿದೆ. ಅದೇ ರೀತಿ ಕಾರ್ಮಿಕ ಸಂಘಟನೆಗಳು ಸಹ ಕೂಲಿಕಾರರ ಪರವಾಗಿ ನಮೂನೆ-6 ಮೂಲಕ ಕೆಲಸದ ಬೇಡಿಕೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಬೇಡಿಕೆ ಬಂದ ತಕ್ಷಣ ತ್ವರಿತವಾಗಿ ಕೆಲಸ ಒದಗಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ನರೇಗಾ ಕುರಿತು ಅರಿವು: ಗ್ರಾಮ ಪಂಚಾಯಿತಿಗಳಲ್ಲಿ ಉದ್ಯೋಗ ಮೇಳ, ಜಾಗೃತಿ ಸಭೆಗಳು ಹಾಗೂ ಮನೆಮನೆಗೆ ಮಾಹಿತಿ ನೀಡುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಇದರ ಮೂಲಕ ಗ್ರಾಮೀಣ ಜನರಿಗೆ ನರೇಗಾ ಯೋಜನೆಯ ಸೌಲಭ್ಯಗಳ ಕುರಿತು ಅರಿವು ಮೂಡಿಸಲಾಗುತ್ತಿದೆ. ಗ್ರಾಮಸ್ಥರು ತಮ್ಮ ಹಕ್ಕಿನ ಉದ್ಯೋಗವನ್ನು ಪಡೆದು ಸರ್ಕಾರದ ಯೋಜನೆಯ ಸದುಪಯೋಗ ಪಡೆಯಬೇಕು ಎಂದು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಹಾಗೂ ಉದ್ಯೋಗಕ್ಕಾಗಿ ಅರ್ಜಿ ಸಲ್ಲಿಸಲು ಸಂಬಂಧಿಸಿದ ಗ್ರಾಮ ಪಂಚಾಯಿತಿ ಸಂಪರ್ಕಿಸಬಹುದಾಗಿದೆ. ಜತೆಗೆ ಸರ್ಕಾರದ ಉಚಿತ ಸಹಾಯವಾಣಿ ಸಂಖ್ಯೆ 8277506000ಗೆ ಕರೆಮಾಡಿ ಮಾಹಿತಿ ಪಡೆಯಬಹುದು. ಗ್ರಾಮೀಣ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಯೋಜನೆಯ ಸದುಪಯೋಗ ಪಡೆದು, ತಮ್ಮ ಗ್ರಾಮದಲ್ಲಿಯೇ ಉದ್ಯೋಗ ಹೊಂದುವಂತೆ ಅವರು ಮನವಿ ಮಾಡಿಕೊಂಡಿದ್ದಾರೆ.

ವಿವಿಧ ಅಭಿವೃದ್ಧಿ ಕಾಮಗಾರಿಗೆ ಚಾಲನೆ



ಹಾವೇರಿ ತಾಲೂಕಿನ ಕುರುಬಗೊಂಡ ಗ್ರಾಮದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ಬಸವರಾಜ ಶಿವಣ್ಣನವರ ಗುರುವಾರ ಭೂಮಿಪೂಜೆ ನೆರವೇರಿಸಿದರು.

• **ಕನ್ನಡಪ್ರಭ ವಾರ್ತೆ** ಹಾವೇರಿ

ಬ್ಯಾಡಗಿ ವಿಧಾನಸಭಾ ಕ್ಷೇತ್ರದ ಹಾವೇರಿ ತಾಲೂಕಿನ ಕುರುಬಗೊಂಡ, ದೇವಿಹೊಸೂರು ಸೇರಿದಂತೆ ವಿವಿಧ ಗ್ರಾಮಗಳಲ್ಲಿ ₹2.49 ಕೋಟಿ ವೆಚ್ಚದಲ್ಲಿ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಬಸವರಾಜ ಶಿವಣ್ಣನವರ ಗುರುವಾರ ಚಾಲನೆ ನೀಡಿದರು.

ಕುರುಬಗೊಂಡ ಗ್ರಾಮದಲ್ಲಿ ₹30 ಲಕ್ಷ ವೆಚ್ಚದಲ್ಲಿ ಕುರುಬಗೊಂಡ-ಹೊಂಬರಡಿ ರಸ್ತೆ ಅಭಿವೃದ್ಧಿ, ₹30 ಲಕ್ಷ ವೆಚ್ಚದಲ್ಲಿ ಕರುಬಗೊಂಡದಿಂದ ಬ್ಯಾಡಗಿ ರಸ್ತೆ, ₹75 ಲಕ್ಷ ವೆಚ್ಚದಲ್ಲಿ ಕಬ್ಬೂರು ತಾಂಡಾದಿಂದ ಸೂಡಂಬಿ ರಸ್ತೆಯ ವರೆಗೆ ಮುಂದುವರಿದ ಕಾಮಗಾರಿ, ₹80 ಲಕ್ಷ ವೆಚ್ಚದಲ್ಲಿ ಎಂ.ಎ. ತಿಮ್ಮಾಪುರದಿಂದ ಶಿವಾಜಿನಗರ ತಾಂಡಾ ರಸ್ತೆ ಅಭಿವೃದ್ಧಿಗೆ ಭೂಮಿಪೂಜೆ ನೆರವೇರಿಸಿದರು. ದೇವಿಹೊಸೂರು ಗ್ರಾಮದ ಆಯುಷ್ಮಾನ್ ಆರೋಗ್ಯ ಮಂದಿರದಲ್ಲಿ ₹5 ಲಕ್ಷ ಶಾಸಕರ ಅನುದಾನದಲ್ಲಿ ನಿರ್ಮಿಸಿರುವ ಊಟದ ಹಾಲ್ ಉದ್ಘಾಟಿಸಿದರು.

ದೇವಿಹೊಸೂರು ಗ್ರಾಮದ ಸರ್ಕಾರಿ ಉರ್ದು ಪ್ರೌಢಶಾಲೆಯಲ್ಲಿ ₹14 ಲಕ್ಷ ವೆಚ್ಚದಲ್ಲಿ ಕೊಠಡಿ ನಿರ್ಮಾಣ ಕಾಮಗಾರಿಗೆ, ₹15 ಲಕ್ಷ ವೆಚ್ಚದಲ್ಲಿ ದೇವಿಹೊಸೂರ ಗ್ರಾಮದ ಪರಿಶಿಷ್ಟ ಜಾತಿ ಕಾಲನಿಯಲ್ಲಿ ಸಿಸಿ ರಸ್ತೆ ಮತ್ತು ಸಿಸಿ ಗಟಾರ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು. ಈ ವೇಳೆ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು, ಅಧಿಕಾರಿಗಳು ಹಾಜರಿದ್ದರು.

ರಾಣಿಬೆನ್ನೂರು: ಅಪರಿಚಿತ ಪುರುಷ ಶವ ಪತ್ತೆ

ಹಾವೇರಿ: ರಾಣಿಬೆನ್ನೂರು ನಗರದ ತರಕಾರಿ ಮಾರುಕಟ್ಟೆಯಲ್ಲಿ ಮಲಗಿದ್ದ ಸಿತಿಯಲ್ಲಿ ಅಂದಾಜು 45ರಿಂದ 50 ವರ್ಷದ ಅಪರಿಚಿತ ಪುರುಷ ಶವಪತ್ತೆ ಯಾಗಿದ್ದು, ಮೃತನ ಬಗ್ಗೆ ಮಾಹಿತಿ ಲಭ್ಯವಾಗಿಲ್ಲ. ಪ್ರಕರಣ ದಾಖಲಿಸಿಕೊಂಡು ತನಿಖೆಕೈಗೊಳ್ಳಲಾಗಿದೆ ಎಂದು ರಾಣಿಬೆನ್ನೂರು ಶಹರ ಪೊಲೀಸ್ ಠಾಣೆ ಆರಕ್ಷಕ ಉಪ ನಿರೀಕ್ಷಕರು ತಿಳಿಸಿದ್ದಾರೆ. ಮೃತ ವ್ಯಕ್ತಿ 5.2 ಅಡಿ ಎತ್ತರ, ಸಾಧರಣ ಮೈಕಟ್ಟು, ಸಾದಗಪ್ಪು ಮೈಬಣ್ಣ, ದುಂಡು ಮುಖ ಹೊಂದಿದ್ದು, ಬಲಗೈ ಮೇಲೆ ಅಭಿಷೇಕ, ಕವನಾ ಅಂತಾ ಹಚ್ಚೆ ಗುರುತು ಇದೆ. ವಾರಸುದಾರರು ಇದ್ದಲ್ಲಿ ಪೊಲೀಸ್ ಠಾಣೆಗೆ ಅಥವಾ ರಾಣಿಬೆನ್ನೂರು ಶಹರ ಪೊಲೀಸ್ ಠಾಣೆಯ ದೂ.08373-266333, ಪಿಎಸ್ಐ ಮೊ.9480804550 ಅಥವಾ ಸಿಪಿಐ ಮೊ.9480804532 ಸಂಪರ್ಕಿಸಲು ಕೋರಲಾಗಿದೆ.

ಹೆಸ್ಕಾಂ ಗ್ರಾಹಕರಿಗೆ ಪ್ರತಿ ಯೂನಿಟ್‌ಗೆ 10 ಪೈಸೆ ಮರುಪಾವತಿ

• **ಕನ್ನಡಪ್ರಭ ವಾರ್ತೆ** ಹಾವೇರಿ



ಇಂಧನ ಸಚಿವ ಕೆ.ಜೆ. ಜಾರ್ಜ್ ಅವರ ಮಾರ್ಗದರ್ಶನದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಹೆಸ್ಕಾಂ, 2024-25ರ ಸಾಲಿನಲ್ಲಿ ₹153.46 ಕೋಟಿ ಉಳಿತಾಯ ಮಾಡಿದ್ದು, ಈ ಹಣವನ್ನು ಗ್ರಾಹಕರಿಗೆ ಮರು ಪಾವತಿಸುತ್ತಿದ್ದೇವೆ ಎಂದು ಹೆಸ್ಕಾಂ ಅಧ್ಯಕ್ಷ ಸೈಯದ್ ಅಜೀಮ್‌ಪೀರ್ ಎಸ್. ಖಾದ್ರಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ವಿದ್ಯುತ್ ಖರೀದಿ, ಪೂರೈಕೆಯನ್ನು ಉತ್ತಮವಾಗಿ ನಿರ್ವಹಿಸಿದ ಪರಿಣಾಮ 2024-2025ರಲ್ಲಿ ಹೆಸ್ಕಾಂ ₹153.46 ಕೋಟಿ ಉಳಿತಾಯ ಮಾಡಿದೆ. ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ (ಕೆಇಆರ್‌ಸಿ) ಆದೇಶದ ಅನ್ವಯ 2024-25ನೇ ಆರ್ಥಿಕ ವರ್ಷದ ಪ್ರತಿಯೊಬ್ಬ ಗ್ರಾಹಕರಿಗೆ ಮಾತ್ರ 2024-25ನೇ ಸಾಲಿನ ಅವಧಿಯಲ್ಲಿ ಅವರ ನಿಜವಾದ ಬಳಕೆಯನ್ನು ಆಧರಿಸಿ ಪ್ರತಿ ಯೂನಿಟ್‌ಗೆ 10 ಪೈಸೆಯಂತೆ 2026-2027ರಲ್ಲಿ ಪ್ರತಿ ತಿಂಗಳು ಸಮಾನ ಕಂತುಗಳಲ್ಲಿ (12 ಕಂತುಗಳು) ಮರು ಪಾವತಿಸಲಾಗುತ್ತದೆ. ಈ ಮೊತ್ತವನ್ನು ವಿದ್ಯುತ್ ಬಿಲ್‌ನಲ್ಲಿ ಆರ್ಥಿಕ ವರ್ಷ 25 ಟ್ರೂ ಅಪ್ ಶುಲ್ಕ ಎಂದು ಪ್ರತ್ಯೇಕವಾಗಿ ನಮೂದಿಸಲಾಗುತ್ತದೆ ಎಂದು ತಿಳಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ರಾಜ್ಯ ಸರ್ಕಾರ ಸದಾ ರೈತರ ಪರ ಕೆಲಸ ಮಾಡುತ್ತಿದೆ. ರೈತರಿಗೆ ಹಗಲು ಹೊತ್ತಿನಲ್ಲಿಯೇ ಏಳು ಗಂಟೆಗಳ ಕಾಲ ವಿದ್ಯುತ್ ನೀಡುವ ನಿಟ್ಟಿನಲ್ಲಿ ಕುಸುಮ್ ಬಿ ಹಾಗೂ ಕುಸುಮ್ ಸಿ ಯೋಜನೆಗೆ ಒತ್ತು ನೀಡಲಾಗುತ್ತಿದೆ. ಗ್ರಾಹಕರಿಗೆ 200 ಯೂನಿಟ್ ವರೆಗೆ ಉಚಿತ ವಿದ್ಯುತ್ ನೀಡುವ ಗೃಹಜ್ಯೋತಿ ಯೋಜನೆ ಯಶಸ್ವಿಯಾಗಿದೆ. ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ನೀಡಲು ನವೀಕೃತ ಶೀಘ್ರ ಸಂಪರ್ಕ ಯೋಜನೆಯನ್ನೂ ಜಾರಿಗೆ ತರಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಕೆಎಸ್‌ಆರ್‌ಟಿಸಿ ಮಳಿಗೆಗಳಲ್ಲಿ ತಂಬಾಕು ಉತ್ಪನ್ನ ಮಾರಾಟ ನಿಷೇಧ

• **ಕನ್ನಡಪ್ರಭ ವಾರ್ತೆ** ಹಾವೇರಿ

ಜಿಲ್ಲೆಯ ಸಾರಿಗೆ ಸಂಸ್ಥೆ ಬಸ್ ನಿಲ್ದಾಣಗಳ ಮಳಿಗೆಗಳಲ್ಲಿ ಕಡ್ಡಾಯವಾಗಿ ತಂಬಾಕು ಉತ್ಪನ್ನಗಳ ಮಾರಾಟ ನಿಷೇಧಿಸಲು ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿಗೆ ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ ದಾನಮ್ಮನವರ ಸೂಚನೆ ನೀಡಿದರು.



ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ತಂಬಾಕು ನಿಯಂತ್ರಣ ಕುರಿತು ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ ನಡೆಸಿದ ಅವರು, ತಂಬಾಕು ನಿಯಂತ್ರಣ ತಿದ್ದುಪಡಿ ಕಾಯ್ದೆ-2024ರನ್ವಯ ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಉತ್ಪನ್ನಗಳ ಬಳಕೆ ನಿಷೇಧಿಸಲಾಗಿದೆ. 21 ವರ್ಷದೊಳಗಿನವರಿಗೆ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವಂತಿಲ್ಲ ಹಾಗೂ ದಂಡದ ಮೊತ್ತವನ್ನು ₹200 ಮೊತ್ತದ ಬದಲಾಗಿ ಒಂದು ಸಾವಿರಕ್ಕೆ ಹೆಚ್ಚಿಸಲಾಗಿದೆ. ಈ ಕಾಯ್ದೆಗಳ ಕುರಿತು ಹೆಚ್ಚಿನ ಜಾಗೃತಿ ಮೂಡಿಸಬೇಕು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಕಡ್ಡಾಯವಾಗಿ ದಂಡದ ಸೂಚನಾ ಫಲಕ ಅಳವಡಿಸಬೇಕು ಎಂದು ಸೂಚಿಸಿದರು.

ತಂಬಾಕು ಉತ್ಪನ್ನಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಸಾರ್ವಜನಿಕರಿಗೆ, ಶಾಲಾ-ಕಾಲೇಜು ಮಕ್ಕಳಿಗೆ ಸತತವಾಗಿ ಅರಿವು ಮೂಡಿಸಬೇಕು. ತಾಲೂಕು ಮಟ್ಟದಲ್ಲಿ ನಿಯಮಾನುಸಾರ ಸಭೆ ನಡೆಸಬೇಕು. ಅಂಗಡಿಗಳ ಮೇಲೆ ಅನಿರೀಕ್ಷಿತ ದಾಳಿ ನಡೆಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ಎಲ್ಲ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗಳಲ್ಲಿ ತಂಬಾಕು ಮಾರಾಟಗಾರರಿಗೆ ನಿಯಮನುಸಾರ ಪ್ರತ್ಯೇಕ ಪರವಾನಗಿ ನೀಡಬೇಕು ಎಂದು ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಮುಖ್ಯಾಧಿಕಾರಿಗಳಿಗೆ ಸೂಚನೆ ನೀಡಿದರು.

ನಿಯಮಾನುಸಾರ ಶಾಲಾ-ಕಾಲೇಜುಗಳ 100 ಮೀಟರ್ ಅಂತರದೊಳಗೆ ತಂಬಾಕು ಉತ್ಪನ್ನಗಳ ಮಾರಾಟ ಮಾಡುವಂತಿಲ್ಲ. ಆಯಾ ಶಾಲಾ-ಕಾಲೇಜುಗಳ ವ್ಯಾಪ್ತಿಯ ಸ್ಥಳೀಯ ಗ್ರಾಮೀಣ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು, ಶಿಕ್ಷಕರು, ಎಸ್‌ಡಿಎಂಸಿ ಪ್ರತಿನಿಧಿಗಳು ಹಾಗೂ ಪೊಲೀಸ್ ಇಲಾಖೆ ಸಮನ್ವಯದಿಂದ ಕಾರ್ಯನಿರ್ವಹಿಸುವ ಮೂಲಕ ಶಾಲಾ-ಕಾಲೇಜುಗಳ 100 ಮೀಟರ್ ಅಂತರದೊಳಗೆ ತಂಬಾಕು ಉತ್ಪನ್ನಗಳ ಮಾರಾಟ ತಡೆಗೆ ಕ್ರಮಕೈಗೊಳ್ಳಬೇಕು. ಕೋಟ್ಪಾ ಕಾಯ್ದೆ ಪರಿಣಾಮಕಾರಿ ಅನುಷ್ಠಾನದ ಮೂಲಕ ತಂಬಾಕು ಮುಕ್ತ ಗ್ರಾಮ ಘೋಷಣೆಯಾದ ಗ್ರಾಮಗಳಲ್ಲಿ ನಾಮಫಲಕ ಅಳವಡಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಜಗದೀಶ್ ಪಾಟೀಲ ಮಾತನಾಡಿ, ಜಿಲ್ಲಾ ಮಟ್ಟದಲ್ಲಿ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿ ಜಿಲ್ಲೆಯಲ್ಲಿ ಕಳೆದ 2025-26ನೇ ಸಾಲಿನಲ್ಲಿ 29 ದಾಳಿ ನಡೆಸಿ, 316 ಪ್ರಕರಣ ದಾಖಲಿಸಲಾಗಿದೆ ಹಾಗೂ ₹30,100 ದಂಡ ಸಂಗ್ರಹಣೆ ಮಾಡಲಾಗಿದೆ. 494 ಪುರುಷ ಹಾಗೂ 58 ಮಹಿಳೆಯರು ಸೇರಿ 552 ಜನರಿಗೆ ಆಪ್ತಸಮಾಲೋಚನೆ ನಡೆಸಲಾಗಿದೆ. ನಿಕೋಟಿನ್ ಗಮ್ ಹಾಗೂ ಅಗತ್ಯ ಚಿಕಿತ್ಸೆ ನೀಡಲಾಗಿದೆ. ತಂಬಾಕು ಸೇವನೆಯ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವುದು ಮತ್ತು ತಂಬಾಕು ನಿಯಂತ್ರಣ ಕಾಯ್ದೆಯ ಪರಿಣಾಮಕಾರಿ ಅನುಷ್ಠಾನದ ಕುರಿತು ಸಭೆಗೆ ಮಾಹಿತಿ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಜಯಾನಂದ, ಡಾ. ಚನ್ನಬಸಯ್ಯ ವಿರಕ್ತಮಠ, ಡಾ. ಸರಿತಾ, ಡಾ. ನೀಲೇಶ, ಡಾ. ಸಂತೋಷ ದಡ್ಡಿ, ತಾಲೂಕು ಆರೋಗ್ಯಾಧಿಕಾರಿಗಳು, ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ವೈಭವ...

ನಾಲ್ಕು ದಿನ ವಿವಿಧ ಧಾರ್ಮಿಕ ಕಾರ್ಯಕ್ರಮ, ಸಾಮೂಹಿಕ ವಿವಾಹ

ಅರೇಮಲ್ಲಾಪುರದಲ್ಲಿ ಇಂದಿನಿಂದ ಅಡ್ಡಪಲ್ಲಕ್ಕಿ ಮಹೋತ್ಸವ

• **ಕನ್ನಡಪ್ರಭ ವಾರ್ತೆ** ರಾಣಿಬೆನ್ನೂರು

ತಾಲೂಕಿನ ಅರೇಮಲ್ಲಾಪುರ ಗ್ರಾಮದಲ್ಲಿ ಮೇ 8ರಿಂದ 11ರ ವರೆಗೆ ಜಗದ್ಗುರು ಪಂಚಾಚಾರ್ಯರ ಅಡ್ಡಪಲ್ಲಕ್ಕಿ ಮಹೋತ್ಸವ ಸೇವಾ ಸಮಿತಿಯಿಂದ ಪಂಚಾಚಾರ್ಯರ ಅಡ್ಡಪಲ್ಲಕ್ಕಿ ಮಹೋತ್ಸವ, ವೀರಭದ್ರೇಶ್ವರ ದೇವಸ್ಥಾನ ಗೋಪುರ ಕಳಸಾರೋಹಣ, ಕಲ್ಮೇಶ್ವರ ದೇವರ ಮರು ಪ್ರಾಣ ಪ್ರತಿಷ್ಠಾಪನೆ, ಮಾತಂಗೆಮ್ಮ ದೇವಿಯ ಮರುಪ್ರಾಣ ಪ್ರತಿಷ್ಠಾಪನೆ, ಗ್ರಾಮದಲ್ಲಿ ಕರಗಲ್ಲು ಸ್ಥಾಪನೆ ಹಾಗೂ ಸಾಮೂಹಿಕ ವಿವಾಹ ಮಹೋತ್ಸವ ಕಾರ್ಯಕ್ರಮಗಳು ಜರುಗಲಿವೆ.

ಮೇ 8ರಂದು ಬೆಳಗ್ಗೆ 9ಕ್ಕೆ ಕರಗಲ್ಲು ಸ್ಥಾಪನೆ, ಸಂಜೆ 7ಕ್ಕೆ ಧರ್ಮಸಭೆ, ಶ್ರೇಷ್ಠ ಜೀವನಕ್ಕೆ ಕೆಲವು ಮೌಲ್ಯಗಳು ಕುರಿತು ಉಪನ್ಯಾಸ ನಡೆಯಲಿದೆ. ಫಕೀರ ದಿಂಗಾಲೇಶ್ವರ ಸ್ವಾಮೀಜಿ ಸಾನ್ನಿಧ್ಯ ವಹಿಸುವರು.

ಮೇ 9ರಂದು ಬೆಳಗ್ಗೆ 9ರಿಂದ 11ರ ವರೆಗೆ ವೀರಭದ್ರೇಶ್ವರ ದೇವಸ್ಥಾನದ ಕಳಸ ಪುರ ಪ್ರವೇಶ ಕಾರ್ಯಕ್ರಮ ನಡೆಯುತ್ತದೆ. ಹೊನ್ನಾಳಿ ಹಿರೇಕಲ್ಮಠದ ಚನ್ನಮಲ್ಲಿಕಾರ್ಜುನ ಶಿವಾಚಾರ್ಯರು, ರಟ್ಟೀಹಳ್ಳಿ ಕಬ್ಬಿಣಕಂತಿ ಮಠದ ಶಿವಲಿಂಗ ಶಿವಾಚಾರ್ಯರು, ಐರಣಿ ಕ್ಷೇತ್ರದ ಬಸವರಾಜದೇಶಿ ಕೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯಶೋದಾ ವಂಟಗೋಡಿ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಸಂಜೆ 6ಕ್ಕೆ ಶಿರಗುಪ್ಪಿ ಸ್ವಾಮಿ ವಿವೇಕಾನಂದ ಶಾಲೆಯ ವಿದ್ಯಾರ್ಥಿಗಳಿಂದ ಮಲ್ಲಗಂಬ ಪ್ರದರ್ಶನ ನಡೆಯುತ್ತದೆ.

ಮೇ 10ರಂದು ಕಲ್ಮೇಶ್ವರ ದೇವರ ಮತ್ತು ಮಾತಂಗೆಮ್ಮ ದೇವಿ ಮರುಪ್ರಾಣ ಪ್ರತಿಷ್ಠಾಪನೆ ಹಾಗೂ ವಟುಗಳ ಲಿಂಗದೀಕ್ಷೆ ಕಾರ್ಯಕ್ರಮ ನಡೆಯುತ್ತದೆ. ಸಂಜೆ 7 ಗಂಟೆಗೆ ಧರ್ಮಸಭೆ ನಡೆಯುವುದು. ಆವರಗೊಳ್ಳ ಪುರವರ್ಗ ಮಠದ ಓಂಕಾರ ಶಿವಾಚಾರ್ಯ ಸ್ವಾಮೀಜಿ, ಹರಿಹರ ಪಂಚಮಸಾಲಿ ಪೀಠದ ವಚನಾನಂದ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಡಿಸಿ ವಿಜಯಮಹಾಂತೇಶ ದಾನಮ್ಮನವರ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ಮೇ 11ರಂದು ಜಗದ್ಗುರು ಪಂಚಾಚಾರ್ಯರ ಅಡ್ಡಪಲ್ಲಕ್ಕಿ ಮಹೋತ್ಸವ, ವೀರಭದ್ರೇಶ್ವರ ಗೋಪುರ ಕಳಸಾರೋಹಣ ಹಾಗೂ ಸಾಮೂಹಿಕ ವಿವಾಹ ಕಾರ್ಯಕ್ರಮ ನಡೆಯುವುದು. ಮಧ್ಯಾಹ್ನ 12ಕ್ಕೆ ಜನಜಾಗೃತಿ ಧರ್ಮಸಭೆ ನಡೆಯುತ್ತದೆ. ರಂಭಾಪುರಿ ಪೀಠದ ವೀರಸೋಮೇಶ್ವರ ಸ್ವಾಮೀಜಿ, ಉಜ್ಜಯಿನಿ ಪೀಠದ ಸಿದ್ದಲಿಂಗರಾಜ ದೇಶಿಕೇಂದ್ರ ಸ್ವಾಮೀಜಿ, ಶ್ರೀಶೈಲ ಪೀಠದ ಚನ್ನಸಿದ್ಧರಾಮ ಪಂಡಿತಾರಾಧ್ಯ ಸ್ವಾಮೀಜಿ, ಕಾಶೀಪೀಠದ ಚಂದ್ರಶೇಖರ ಸ್ವಾಮೀಜಿ ಹಾಗೂ ವಿಶ್ವಾರಾಧ್ಯ ಮಲ್ಲಿಕಾರ್ಜುನ ಸ್ವಾಮೀಜಿ ಸಾನ್ನಿಧ್ಯ ವಹಿಸುವರು.

ಹೊನ್ನಾಳಿ ಹಿರೇಕಲ್ಮಠದ ಒಡೆಯರ ಚನ್ನಮಲ್ಲಿಕಾರ್ಜುನ ಶಿವಾಚಾರ್ಯರು, ದಿಂಡದಹಳ್ಳಿ ಪಶುಪತಿ ಶಿವಾನಂದ ಶಿವಾಚಾರ್ಯರು, ಲಿಂಗದಹಳ್ಳಿಯ ವೀರಭದ್ರ ಶಿವಾಚಾರ್ಯರು, ಲಿಂಗನಾಯಕನಹಳ್ಳಿ ಚನ್ನವೀರ ಸ್ವಾಮೀಜಿ, ಹಾವೇರಿ ಬಣ್ಣದಮಠದ ಅಭಿನವ ರುದ್ರ ಶಿವಾಚಾರ್ಯರು, ಶನೈಶ್ಚರ ಮಂದಿರದ ಶಿವಯೋಗಿ ಶಿವಾಚಾರ್ಯರು, ಗುರುನಾಗ ಭೂಷಣ ಸ್ವಾಮೀಜಿ, ಮಣಕೂರು ಮಲ್ಲಿಕಾರ್ಜುನ ಶಿವಾಚಾರ್ಯರು, ನಾಗವಂದ ಹೊರಮಠದ ಶಿವಯೋಗಿ ಶಿವಾಚಾರ್ಯರು, ಹಿರೇಮಣಕಟ್ಟಿಯ ವಿಶ್ವಾರಾಧ್ಯ ಶಿವಾಚಾರ್ಯರು, ಗಂಜೀಗಟ್ಟಿಯ ವೈದ್ಯನಾಥ ಶಿವಾಚಾರ್ಯರು, ಹರಪನಹಳ್ಳಿ ತೆಗ್ಗಿನಮಠದ ವರಸದ್ಯೋಜಾತ ಸ್ವಾಮೀಜಿ, ಖಂಡೇರಾಯನಹಳ್ಳಿಯ ನಾಗರಾಜಾನಂದ ಸ್ವಾಮೀಜಿ, ರಾಂಪುರದ ಶಿವಕುಮಾರ ಹಾಲಸ್ವಾಮೀಜಿ, ದೊಡ್ಡಪೇಟೆ ಗುರುಬಸವ ಸ್ವಾಮೀಜಿ, ದುಗ್ಗಾವತಿ ವೀರಭದ್ರೇಶ್ವರ ಸ್ವಾಮೀಜಿ, ಪುಣ್ಯಕೋಟಿಮಠದ ಬಾಲಯೋಗಿ ಜಗದೀಶ್ವರ ಸ್ವಾಮೀಜಿ, ಅರೇಮಲ್ಲಾಪುರದ ಪ್ರಣವಾನಂದರಾಮ ಸ್ವಾಮೀಜಿ ಉಪಸ್ಥಿತರಿರುವರು. ವಕೀಲ ಪಿ.ಆರ್. ಕುಪ್ಪೇಲೂರ ಅಧ್ಯಕ್ಷತೆ ವಹಿಸುವರು.

ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಧರ್ಮಸಭೆ ಉದ್ಘಾಟಿಸುವರು. ಶಾಸಕ ಪ್ರಕಾಶ ಕೋಳಿವಾಡ ಮಾತಂಗೆಮ್ಮ ದೇವಿ ದೇವಸ್ಥಾನ ಉದ್ಘಾಟಿಸುವರು. ಮಾಜಿ ಶಾಸಕ ಅರುಣಕುಮಾರ ಪೂಜಾರ ಕಲ್ಮೇಶ್ವರ ದೇವಸ್ಥಾನ ಉದ್ಘಾಟಿಸುವರು. ಸಂಸದ ಬಸವರಾಜ ಬೊಮ್ಮಾಯಿ, ಸಚಿವರಾದ ಶಿವಾನಂದ ಪಾಟೀಲ, ಲಕ್ಷ್ಮೀ ಹೆಬ್ಬಾಳಕರ, ಈಶ್ವರ ಖಂಡ್ರೆ, ಉಪ ಸಭಾಪತಿ ರುದ್ರಪ್ಪ ಲಮಾಣಿ ವಿಶೇಷ ಆಹ್ವಾನಿತರಾಗಿ ಆಗಮಿಸುವರು. ಶಾಸಕರಾದ ಬಸವರಾಜ ಶಿವಣ್ಣನವರ, ಶ್ರೀನಿವಾಸ ಮಾನೆ, ಯು.ಬಿ. ಬಣಕಾರ, ಎಂ.ಪಿ. ರೇಣುಕಾಚಾರ್ಯ, ಆರ್. ಶಂಕರ್, ಬಿ.ಸಿ. ಪಾಟೀಲ, ಎಚ್.ಎಸ್. ಶಿವಶಂಕರ, ವಿರೂಪಾಕ್ಷಪ್ಪ ಬಳ್ಳಾರಿ, ಸಂತೋಷಕುಮಾರ ಪಾಟೀಲ ಆಗಮಿಸುವರು ಎಂದು ಪ್ರಕಟಣೆ ತಿಳಿಸಿದೆ.

ಪ್ರತಿಯೊಂದು ಗ್ರಾಮಕ್ಕೂ ಶುದ್ಧ ನೀರು, ರಸ್ತೆ

ಬ್ಯಾಡಗಿಯಲ್ಲಿ ₹5 ಕೋಟಿ ವೆಚ್ಚದ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿದ ಶಾಸಕ ಶಿವಣ್ಣನವರ

• **ಕನ್ನಡಪ್ರಭ ವಾರ್ತೆ** ಬ್ಯಾಡಗಿ

ತಾಲೂಕಿನ ಪ್ರತಿಯೊಂದು ಗ್ರಾಮಕ್ಕೂ ಶುದ್ಧ ನೀರು, ರಸ್ತೆ ಸೇರಿದಂತೆ ಮೂಲಭೂತ ಸೌಲಭ್ಯ ಕಲ್ಪಿಸುವ ಮೂಲಕ ಸಂಪೂರ್ಣ ಅಭಿವೃದ್ಧಿಗೆ ಒತ್ತು ನೀಡಲಾಗುತ್ತಿದೆ ಎಂದು ಶಾಸಕ ಬಸವರಾಜ ಶಿವಣ್ಣನವರ ಹೇಳಿದರು.

ತಾಲೂಕಿನ ಹೆಡಿಗ್ಗೊಂಡ, ಕುಮ್ಮೂರು, ಖುರ್ದವೀರಾಪುರ ಗ್ರಾಮದಲ್ಲಿ ಲೋಕೋಪಯೋಗಿ, ನಿರ್ಮಿತಿ ಕೇಂದ್ರ ಆಶ್ರಯದಲ್ಲಿ ₹5 ಕೋಟಿ ವೆಚ್ಚದ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು. ತಾಲೂಕಿನ ಹೆಡಿಗ್ಗೊಂಡ, ಕುಮ್ಮೂರು, ಖುರ್ದವೀರಾಪುರ ಗ್ರಾಮಗಳಲ್ಲಿ ಬಹುದಿನಗಳಿಂದ ರಸ್ತೆ ಹಾಗೂ ಚರಂಡಿ ನಿರ್ಮಿಸಲು ಗ್ರಾಮಸ್ಥರು ಬೇಡಿಕೆಯಿಟ್ಟಿದ್ದರು. ಗ್ರಾಮದಲ್ಲಿ ಸ್ವಚ್ಛತೆ ಹಾಗೂ ಶುದ್ಧ ವಾತಾವರಣ ಕಾಪಾಡಿಕೊಂಡಲ್ಲಿ ರೋಗ-ರುಜಿನ ತಡೆಗಟ್ಟಲು ಸಾಧ್ಯವಾಗಲಿದೆ. ಈ ಹಿನ್ನೆಲೆಯಲ್ಲಿ ಗ್ರಾಮ ವ್ಯಾಪ್ತಿಯಲ್ಲಿಗ್ರಾ.ಪಂ.ಹಾಗೂಲೋಕೋಪಯೋಗಿ ಇಲಾಖೆ ಆಶ್ರಯದಲ್ಲಿ ಇಂತಹ ಕಾಮಗಾರಿ ಹಮ್ಮಿಕೊಂಡಿದ್ದೇವೆ. ಕುಮ್ಮೂರು ಗ್ರಾಮದಲ್ಲಿ ವಾಲ್ಮೀಕಿ ಭವನ ನಿರ್ಮಿಸಲು ಅನುದಾನ ಬಿಡುಗಡೆಯಾಗಿದೆ ಎಂದರು.

ಕೆರೆ ತುಂಬಿಸಲು ಸೂಚನೆ: ಕಳೆದ ಎರಡು ವರ್ಷಗಳಿಂದ ಹೆಚ್ಚಿನ ಪ್ರಮಾಣದ ಮಳೆ ಬಿದ್ದ ಪರಿಣಾಮ ತುಂಗಭದ್ರಾ ಹಾಗೂ ವರದಾ ನದಿಗಳಿಂದ ನೀರು ತುಂಬಿಸಲಾಗಿದೆ. ಹೀಗಾಗಿ ಕೊಳವೆಬಾವಿಗಳಲ್ಲಿ ಅಂತರ್ಜಲ ಹೆಚ್ಚಿದೆ. ಗುಡ್ಡದಮಲ್ಲಾಪುರ ಏತ ನೀರಾವರಿ ಯೋಜನೆ ಪೈಪ್‌ಲೈನ್ ಕಾಮಗಾರಿಗೆ ಅನುದಾನ ಮಂಜೂರಾಗಿದ್ದು, ಒಂದೇ ಹಂತದಲ್ಲಿ ಟೆಂಡರ್ ಮಾಡಲಾಗುತ್ತಿದೆ. ಶೀಘ್ರದಲ್ಲೇ ಸಚಿವರಿಂದ ಚಾಲನೆ ನೀಡಲಾಗುವುದು ಎಂದರು.



ಬ್ಯಾಡಗಿ ತಾಲೂಕಿನ ಕುಮ್ಮೂರು ಗ್ರಾಮದಲ್ಲಿ ₹5 ಕೋಟಿ ವೆಚ್ಚದ ವಿವಿಧ ಕಾಮಗಾರಿಗಳಿಗೆ ಶಾಸಕ ಬಸವರಾಜ ಶಿವಣ್ಣನವರ ಚಾಲನೆ ನೀಡಿದರು.

ಕೊಟ್ಟ ಭರವಸೆಯಂತೆ ಪೈಪ್‌ಲೈನ್: ತಾಲೂಕಿನ ಮಲೆನಾಡು ಭಾಗದ 13 ಸಾವಿರ ಹೆಕ್ಟೇರು ಕೃಷಿಭೂಮಿಗೆ ನೀರುಣಿಸುವ ಗುಡ್ಡದಮಲ್ಲಾಪುರ ಏತ ನೀರಾವರಿ ಯೋಜನೆಗೆ ಹಾನಗಲ್ಲ ತಾಲೂಕು ಬ್ಯಾತನಾಳ ಬಳಿ ಜಾಕ್‌ವೆಲ್ ಅಳವಡಿಸಿದ್ದು, ಕಾಲುವೆ ಮೂಲಕ ನೀರು ಹರಿದು ಬರುತ್ತಿದೆ. ಸಮರ್ಪಕವಾಗಿ ರೈತರ ಎಲ್ಲ ಜಮೀನುಗಳಿಗೆ ನೀರು ಲಭ್ಯವಾಗುತ್ತಿಲ್ಲ. ಚುನಾವಣೆ ಮುನ್ನ ಕೊಟ್ಟ ಭರವಸೆಯಂತೆ ಕಾಲುವೆಗಳಲ್ಲಿ ಹೊಸದಾಗಿ ಪೈಪ್‌ಲೈನ್ ಅಳವಡಿಸಲು ಡಿಪಿಆರ್‌ಸಿದ್ಧಗೊಳಿಸಿ ಮುಖ್ಯಮಂತ್ರಿ ಸಚಿವ ಸಂಪುಟದಲ್ಲಿ ₹115 ಕೋಟಿ ಮಂಜೂರಾತಿ ನೀಡಿದ್ದಾರೆ ಎಂದರು.

ಶೀಘ್ರದಲ್ಲೇ ಟೆಂಡರ್‌ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಎಲ್ಲ ಕೆರೆಗಳು ನೀರು ಭರ್ತಿಯಾಗಲಿವೆ. ಮುಂಗಾರು ಶುರುವಾದ ಬಳಿಕ ಹೊಳೆಗಳಿಂದ ಕಡ್ಡಾಯವಾಗಿ ಎಲ್ಲ ಕೆರೆಗಳಿಗೆ ಈಗಿನ ಕಾಲುವೆ, ಪೈಪ್‌ಲೈನ್ ಮೂಲಕ ನೀರು ಹರಿಸಬೇಕು ಎಂದು ನಿರ್ವಹಣೆ ಪ್ರಾಧಿಕಾರದ ಎಂಜಿನಿಯರ್‌ಗೆ ಸೂಚನೆ ನೀಡಿರುವುದಾಗಿ ಹೇಳಿದರು.

ಸುಕ್ಷೇತ್ರ ಕದರಮಂಡಲಗಿ, ಗುಡ್ಡದಮಲ್ಲಾಪುರ, ಜೋಯಿಸರಹರಳಹಳ್ಳಿ ಕಾಗಿನೆಲೆ, ಕುಮ್ಮೂರು, ಚಿಕ್ಕಬಾಸೂರು, ಸೇರಿದಂತೆ ಮಹತ್ವದ ಐತಿಹಾಸಿಕ ದೇವಸ್ಥಾನ ಹಾಗೂ ಮಠ-ಮಂದಿರಗಳಿರುವ ಗ್ರಾಮಗಳಲ್ಲಿ ಮೂಲಭೂತ ಸೌಲಭ್ಯ, ಯಾತ್ರಿ ನಿವಾಸ ಹಾಗೂ ಸಮುದಾಯ ಭವನಗಳ ನಿರ್ಮಿಸಲು ಅನುದಾನ ನೀಡಿರುವೆ. ಯಾವುದೇ ಧರ್ಮ, ಜಾತಿ ಭೇದ ಮಾಡದೇ ಎಲ್ಲ ಸಮಾಜಗಳಿಗೂ ನ್ಯಾಯ ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡಿರುವುದಾಗಿ ತಿಳಿಸಿದರು.

ಈ ವೇಳೆ ಪಂಚ ಗ್ಯಾರಂಟಿ ಯೋಜನೆ ತಾಲೂಕಾಧ್ಯಕ್ಷ ಶಂಭನಗೌಡ್ರ ಪಾಟೀಲ, ಕಾಂಗ್ರೆಸ್ ತಾಲೂಕಾಧ್ಯಕ್ಷ ದಾನಪ್ಪ ಚೂರಿ, ನಾಗನಗೌಡ್ರ ಪಾಟೀಲ, ರಮೇಶ ಸುತ್ತಕೋಟಿ, ವೀರನಗೌಡ ಶಿವನಗೌಡ್ರ, ಮಾರುತಿ ಅಚ್ಚೀಗೇರಿ, ಮಲ್ಲಪ್ಪ ದೇಸಾಯಿ, ಲೋಕೋಪಯೋಗಿ ಎಂಜಿನಿಯರ್ ಆಂಜನೇಯ, ಅಶೋಕಪಾಟೀಲ, ಕೆ.ಎಲ್. ಹರೀಶ ಬೀರಪ್ಪ ಕತ್ತಿ ಇತರರಿದ್ದರು.



ಸವಣೂರು ಪಟ್ಟಣದಲ್ಲಿ ಶ್ರೀ ಬಸವೇಶ್ವರ ವೃತ್ತ ಹಾಗೂ ಕಿತ್ತೂರ ರಾಣಿ ಚೆನ್ನಮ್ಮ ವೃತ್ತ ಸ್ಥಾಪನೆಯೊಂದಿಗೆ ಮೂರ್ತಿಗಳ ಪ್ರತಿಷ್ಠಾಪನೆಗೆ ಒತ್ತಾಯಿಸಿ ಸವಣೂರು ಹಿತರಕ್ಷಣಾ ಸಮಿತಿ ಪದಾಧಿಕಾರಿಗಳು ಗುರುವಾರ ಉಪ ವಿಭಾಗಾಧಿಕಾರಿಗೆ ಮನವಿ ಸಲ್ಲಿಸಿದರು.

ಸವಣೂರಲ್ಲಿ ಬಸವೇಶ್ವರ, ಚೆನ್ನಮ್ಮ ವೃತ್ತ ಸ್ಥಾಪನೆಗೆ ಆಗ್ರಹ

ಸವಣೂರು ಹಿತರಕ್ಷಣಾ ಸಮಿತಿಯಿಂದ ಮನವಿ

• **ಕನ್ನಡಪ್ರಭ ವಾರ್ತೆ** ಸವಣೂರು

ಪಟ್ಟಣದ ಪ್ರಮುಖ ಎರಡು ಸ್ಥಳಗಳಲ್ಲಿ ಶ್ರೀ ಬಸವೇಶ್ವರ ವೃತ್ತ ಹಾಗೂ ಕಿತ್ತೂರ ರಾಣಿ ಚೆನ್ನಮ್ಮ ವೃತ್ತ ಸ್ಥಾಪನೆಯೊಂದಿಗೆ ಮೂರ್ತಿಗಳ ಪ್ರತಿಷ್ಠಾಪನೆಗೆ ಒತ್ತಾಯಿಸಿ ಸವಣೂರು ಹಿತರಕ್ಷಣಾ ಸಮಿತಿ ಪದಾಧಿಕಾರಿಗಳು ಗುರುವಾರ ಉಪ ವಿಭಾಗಾಧಿಕಾರಿಗೆ ಮನವಿ ಸಲ್ಲಿಸಿದರು.

ಪಟ್ಟಣದಲ್ಲಿ ಶ್ರೀ ಬಸವಣ್ಣನವರ ತತ್ವ ಅನುಯಾಯಿಗಳು ಅಪಾರ ಸಂಖ್ಯೆಯಲ್ಲಿರುವ ಹಿನ್ನೆಲೆಯಲ್ಲಿ ವಿಶ್ವಗುರು ಬಸವೇಶ್ವರ ಜಯಂತಿಯನ್ನು ಹಾಗೂ ಕಿತ್ತೂರ ರಾಣಿ ಚೆನ್ನಮ್ಮ ಜಯಂತಿಯನ್ನು ಕೇವಲ ಸರ್ಕಾರಿ ಕಚೇರಿ ಹಾಗೂ ಶಾಲಾ-ಕಾಲೇಜುಗಳಲ್ಲಿ ಆಚರಿಸುವಂತಾಗಿದೆ. ಆದ್ದರಿಂದ, ಜಯಂತಿಗಳನ್ನು ಅದ್ಧೂರಿಯಾಗಿ ಆಚರಿಸಲು ದಂಡಿನಪೇಟೆ ಶ್ರೀ ಗಣೇಶ ದೇವಸ್ಥಾನ ಪಕ್ಕದ ಜಾಗದಲ್ಲಿ ವಿಶ್ವಗುರು ಬಸವೇಶ್ವರರ ಮೂರ್ತಿ ಪ್ರತಿಷ್ಠಾಪಿಸಿ, ವೃತ್ತ ನಿರ್ಮಾಣ ಮಾಡಬೇಕು. ಸವಣೂರು ಬಂಕಾಪುರ ಕ್ರಾಸ್ ಅಳ್ನಾವರ ಮನೆಯ ಹತ್ತಿರ ಕಿತ್ತೂರ ರಾಣಿ ಚೆನ್ನಮ್ಮ ಮೂರ್ತಿ ಪ್ರತಿಷ್ಠಾಪಿಸಿ, ವೃತ್ತ (ಸರ್ಕಲ್) ಸ್ಥಾಪನೆಗೆ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ.

ಉಪ ವಿಭಾಗಾಧಿಕಾರಿ ಕಚೇರಿ ಸಿಬ್ಬಂದಿ ಮನವಿ ಸ್ವೀಕರಿಸಿದರು.

ಪ್ರಮುಖರಾದ ಬಿ.ಎಂ. ಪಾಟೀಲ, ರವತಪ್ಪ ಬಿಕ್ಕಣ್ಣನವರ, ಸಿದ್ದಲಿಂಗಪ್ಪ ತೆಗ್ಗಿಹಳ್ಳಿ, ನಾಗಪ್ಪ ತೆಗ್ಗಿಹಳ್ಳಿ, ಬಸವರಾಜ ಇಂಗಳಗಿ, ರಾಜೇಶ್ವರಿ ಬುಶೆಟ್ಟಿ, ಸಮೀತ ಕೆಮ್ಮಣಕೇರಿ, ಶಾಂತಪ್ಪ ಕೋರಿಶೆಟ್ಟರ, ಶಿವಬಸಪ್ಪ ದೇಟಿನ, ವೀರೇಶ ಕಳಪ್ಪನವರ, ಮಲ್ಲಪ್ಪ ನೀರಲಗಿ, ವಿನಾಯಕ ಕೊಳೂರ, ಪ್ರವೀಣ ಬಾಲೇಹೊಸೂರ, ಪ್ರಕಾಶ ಬಾರ್ಕಿ ಹಾಗೂ ಇತರರು ಇದ್ದರು.

ಸಾವಿರಾರು ಕುಟುಂಬಗಳಿಗೆ ಶಾಶ್ವತ ಮನೆ ಹಕ್ಕುಪತ್ರ

ಕಲಕೇರಿ ಗ್ರಾಮದಲ್ಲಿ 492 ಫಲಾನುಭವಿ ಕುಟುಂಬಗಳಿಗೆ ಹಕ್ಕುಪತ್ರ ವಿತರಿಸಿದ ಶಾಸಕ ಶ್ರೀನಿವಾಸ ಮಾನೆ

• **ಕನ್ನಡಪ್ರಭ ವಾರ್ತೆ** ಹಾನಗಲ್ಲ

ಸಣ್ಣ ರೈತರು, ಕೂಲಿಕಾರರು, ಬಡವರು, ಮಧ್ಯಮ ಮತ್ತು ಸಾಮಾನ್ಯ ವರ್ಗಕ್ಕೆ ಸೇರಿದ ಕುಟುಂಬಗಳು ನಿವೇಶನ ಖರೀದಿಸಲು ಸಾಧ್ಯವಾಗದೇ ಸರ್ಕಾರಿ ಮತ್ತು ಖಾಸಗಿ ಜಮೀನುಗಳಲ್ಲಿ ಮನೆ ನಿರ್ಮಿಸಿಕೊಂಡು ಹತ್ತಾರು ವರ್ಷಗಳಿಂದ ಅತಂತ್ರ ಬದುಕು ನಡೆಸುತ್ತಿದ್ದವು. ಇಂಥ ಸಾವಿರಾರು ಕುಟುಂಬಗಳಿಗೆ ಶಾಶ್ವತ ಮನೆ ಮಾಲೀಕತ್ವದ ಹಕ್ಕುಪತ್ರ ವಿತರಿಸಿ ಇದೀಗ ಸ್ವತಂತ್ರಗೊಳಿಸಲಾಗಿದೆ ಎಂದು ಶಾಸಕ ಶ್ರೀನಿವಾಸ ಮಾನೆ ಹೇಳಿದರು.

ತಾಲೂಕಿನ ಕಲಕೇರಿ ಗ್ರಾಮದಲ್ಲಿ ನಡೆದ ಸಮಾರಂಭದಲ್ಲಿ ನಾನಾ ಕಂದಾಯ ಗ್ರಾಮ ಮತ್ತು ಉಪ ಗ್ರಾಮಗಳ 492 ಫಲಾನುಭವಿ ಕುಟುಂಬಗಳಿಗೆ ಹಕ್ಕುಪತ್ರ ವಿತರಿಸಿ ಅವರು ಮಾತನಾಡಿದರು. 2023ರಲ್ಲಿ ತಾಲೂಕಿನಲ್ಲಿ 52 ದಿನಗಳ ಕಾಲ ನಡೆದ ದೃಢಸಂಕಲ್ಪ ಯಾತ್ರೆಯಲ್ಲಿ ಸಾವಿರಾರು ಕುಟುಂಬಗಳಿಗೆ ಮನೆಯ ಮಾಲಿಕತ್ವ ಇಲ್ಲದಿರುವುದು, ಅನೇಕ ಕಡೆಗಳಲ್ಲಿ ಕೋರ್ಟ್‌ನಿಂದ ನೋಟಿಸ್ ಜಾರಿ ಮಾಡಿ ಮನೆ ತೆರವುಗೊಳಿಸುವಂತೆ ಒತ್ತಾಯಿಸುತ್ತಿರುವ ಬಗ್ಗೆ ಜನ ಆತಂಕ ವ್ಯಕ್ತಪಡಿಸುತ್ತಿದ್ದರು. ಆಗ ಅತಂತ್ರ ಸ್ಥಿತಿಯಲ್ಲಿದ್ದ ಕುಟುಂಬಗಳನ್ನು ಸ್ವತಂತ್ರಗೊಳಿಸುವ ಸಂಕಲ್ಪ ಮಾಡಲಾಗಿತ್ತು ಎಂದರು.



ಕಲಕೇರಿ ಗ್ರಾಮದಲ್ಲಿ ನಡೆದ ಸಮಾರಂಭದಲ್ಲಿ ಶಾಸಕ ಶ್ರೀನಿವಾಸ ಮಾನೆ ಹಕ್ಕುಪತ್ರ ವಿತರಿಸಿದರು.

ತಹಸೀಲ್ದಾರ್‌ರೇಣುಕಾ ಎಸ್. ಮಾತನಾಡಿ, ಮನೆ ಬಾಗಿಲಿಗೆ ಸರ್ಕಾರವೇ ಬಂದು ಜನಸಂಕಷ್ಟಗಳಿಗೆ ಸ್ಪಂದಿಸುತ್ತಿದೆ ಎಂದು ಹೇಳಿದರು.

ಕಲಕೇರಿ ಗ್ರಾಮದ 260, ಕಲಕೇರಿ ತಾಂಡಾ ಗ್ರಾಮದ 135, ಮುಳಥಳ್ಳಿಯ 120, ತಾವರಗೊಪ್ಪದ 60, ವೀರಾಪುರದ 40, ವಾಸನದ 23, ಚಿಕ್ಕಹುಲ್ಲಾಳದ 13, ಕನ್ನೇಶ್ವರದ 11, ಹೇರೂರಿನ 9 ಹಾಗೂ ಕೂಸನೂರು ಗ್ರಾಮದ 5 ಫಲಾನುಭವಿ ಕುಟುಂಬಗಳಿಗೆ ಶಾಶ್ವತ ಮನೆ ಮಾಲೀಕತ್ವದ ಹಕ್ಕುಪತ್ರ ವಿತರಿಸಲಾಯಿತು.

ಕೆಪಿಸಿಸಿ ಸದಸ್ಯ ಟಾಕನಗೌಡ ಪಾಟೀಲ, ಮಂಜು ಗೊರಣ್ಣನವರ, ಜಿಪಂ ಮಾಜಿ ಸದಸ್ಯ ಮಹದೇವಪ್ಪ ಬಾಗಸರ, ಮುಖಂಡರಾದ ಪ್ರಕಾಶ ಬಣಕಾರ, ನಾಗಪ್ಪ ಮೆಳ್ಳಳ್ಳಿ, ಬಿ.ಎಸ್. ಗೋರೆಗೌಡ್ರ, ಉಮೇಶ ಗೌಳಿ, ಹೇಮನಗೌಡ ಅಡಿಗಣ್ಣನವರ, ಮಾಲತೇಶ ಗೋರೆಗೌಡ್ರ, ಮೂಕಪ್ಪ ಕೊಪ್ಪದ, ಜಯಮ್ಮ ಮಳೆಣ್ಣನವರ, ವಸಂತ ವೆಂಕಟಾಪುರ, ನಿಜಗುಣಿ ಮಳೆಣ್ಣನವರ, ಅಜ್ಜಪ್ಪ ಕಲ್ಪಾದಿ, ರಾಮಚಂದ್ರ ತಳವಾರ, ಅಲ್ತಾಹಿರ್‌ಕಚವಿ, ಮಂಜು ಆಲದಕಟ್ಟಿ, ಪ್ರಕಾಶ ಮಾಸಣಗಿ, ಲಕ್ಷ್ಮಣಹರಿಜನ, ಸಿದ್ದುಕಲ್ಲಣ್ಣನವರ, ದಯಾನಂದ ಹಂಚಿನಮನಿ, ಪ್ರಕಾಶಗೌಡ ಪಾಟೀಲ, ಶಂಕರಣ್ಣ ಪಾಟೀಲ, ಇಸ್ಮೈಲ್‌ಸಾಬ್ ತಾವರಗೊಪ್ಪ, ಶೇಕಪ್ಪ ಗಾಣಗೇರ, ಗುಡ್ಡನಗೌಡ ಪಾಟೀಲ, ಪ್ರಕಾಶ ಬಾಗಣ್ಣನವರ, ಮಲ್ಲಿಕಾರ್ಜುನ ಕಳ್ಳಿ, ಮಹೇಶ ಬಣಕಾರ, ಬಿ.ಕೆ. ವಾಸನ, ಮಾರ್ತಾಂಡಗೌಡ ಪಾಟೀಲ ಇದ್ದರು.

> **ಹಾನಗಲ್ಲ ತಾಲೂಕಿನ ಗುಡ್ಡಗಾಡು ಭಾಗದ ಕೆರೆಗಳ ಒಡಲು ತುಂಬಿಸಲು ₹220 ಕೋಟಿ ವೆಚ್ಚದ ಕೂಸನೂರು, ನರೇಗಲ್ ಏತ ನೀರಾವರಿ ಯೋಜನೆ ಶೀಘ್ರ ಅನುಷ್ಠಾನಗೊಳಿಸಲಾಗುತ್ತಿದೆ. ಕಲಕೇರಿ ಗ್ರಾಮದಲ್ಲಿ ₹3.30 ಕೋಟಿ ವೆಚ್ಚದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಸುಸಜ್ಜಿತ ಕಟ್ಟಡ ನಿರ್ಮಿಸಲಾಗುತ್ತಿದೆ.**
>
> • **ಶ್ರೀನಿವಾಸ ಮಾನೆ** ಶಾಸಕ

ಕಾಣೆಯಾಗಿದ್ದಾರೆ



ಶ್ರೀ ಪ್ರಕಾಶ ಕಮ್ಮಾರ

ಜನ್ಮ ದಿನಾಂಕ: 1-1-1981 ವಯಸ್ಸು 46 ವರ್ಷ ಧಾರವಾಡ ಗುಲಗಂಜಿಕೊಪ್ಪ ಅಳಗವಾಡಿ ಚಾಳ ಇವರ ಬಾಡಿಗೆ ಮನೆಯಲ್ಲಿದ್ದರು ಸುಮಾರು 15 ದಿನಗಳಿಂದ ಮನೆಗೆ ಬಂದಿರುವುದಿಲ್ಲ ಎಂದು ಬಾಜು ಮನೆಯವರು ತಿಳಿಸಿರುತ್ತಾರೆ, ಇವರಿಗೆ ಕನ್ನಡ, ಇಂಗ್ಲೀಷ್, ಹಿಂದಿ ಮಾತನಾಡಲು ಬರುತ್ತದೆ ಇವರು ನನ್ನ ತಮ್ಮನಾಗಿರುವದರಿಂದ ದಯವಿಟ್ಟು ಯಾರಿಗಾದರೂ ಕಂಡರೆ ಈ ಕೆಳಗಿನ ನಂಬರಗೆ ತಿಳಿಸಲು ವಿನಂತಿಸಿಕೊಳ್ಳುತ್ತೇನೆ
ಶ್ರೀ, ಎಸ್. ವಿ. ಕಮ್ಮಾರ, ಮೊ.: 9945667100 ಶ್ರೀ ಪ್ರಶಾಂತ ವಿ. ಕಮ್ಮಾರ 9164568460, ದಯವಿಟ್ಟು ಯಾರಿಗಾದರೂ ಕಂಡರೆ ಈ ಮೇಲಿನ ನಂಬರಿಗೆ ಫೋನ ಮಾಡಿ ಮತ್ತು ತಮ್ಮ ಹತ್ತಿರ ಇರುವಂತೆ ನೋಡಿಕೊಳ್ಳಿ ಬಂದು ಕರೆದುಕೊಂಡು ಹೋಗುತ್ತೇವೆ. ದಯವಿಟ್ಟು ಸಹಾಯ ಮಾಡಿ.